# ಬೆಳಗಾವಿ ವಾರ್ತೆ

ಕನ್ನಡ ದಿನ ಪತ್ರಿಕೆ, ಬೆಳಗಾವಿ

ಸಂಪಾದಕರು: ಮಹೇಶ್ವರಿ ಭೀಮಶಿ ಭರಮಣ್ಣವರ
EDITOR: MAHESHWARI BHIMASHI BHARAMANNAVARA

BELAGAVI VARTE
KANNADA DAILY MORNING BELAGAVI

G-mail: belagavivarte1@gmail.com
epaper. belagavivarte.com

Volume: 01 | Issue : 43 | MONDAY 20-04-2026 | PRGI No : KNKAN/26/A0962 | Pages:4 | Rs.2.00 | M: 9742418836

## ಕಾಂಗ್ರೆಸ್ ವಿರುದ್ಧ ಎಚ್‌ಡಿಕೆ ವಾಗ್ದಾಳಿ



ಬೆಂಗಳೂರು: ಲೋಕಸಭೆಯಲ್ಲಿ ಮಹಿಳಾ ಮೀಸಲಿಗೆ ಸೋಲುಂಟಾಗಿದ್ದಕ್ಕೆ ಕಾಂಗ್ರೆಸ್ ವಿರುದ್ಧ ಕೇಂದ್ರ ಆಕ್ರೋಶ ವ್ಯಕ್ತಪಡಿಸಿರುವ ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ, ಕಾಂಗ್ರೆಸ್‌ನ ಮಹಿಳಾ ವಿರೋಧಿ ಮನಸ್ಥಿತಿ ಬದಲಾಗಿಲ್ಲ ಎಂದು ವಾಗ್ದಾಳಿ ನಡೆಸಿದ್ದಾರೆ.

1996 ಮತ್ತು 2026; ಕರಾಳ ಇತಿಹಾಸ ಮರುಕಳಿಸಿದೆ. ಮೂರು ದಶಕಗಳ ನಂತರವೂ ಕಾಂಗ್ರೆಸ್ ಪಕ್ಷದ ಮಹಿಳಾ ವಿರೋಧಿ ಮನಸ್ಥಿತಿ ಕೊಂಚವೂ ಬದಲಾಗಿಲ್ಲ ಎನ್ನುವುದಕ್ಕೆ ಲೋಕಸಭೆ ಮತ್ತೊಮ್ಮೆ ಸಾಕ್ಷಿಯಾಯಿತು ಎಂದು ತಮ್ಮ ಎಕ್ಸ್ ಖಾತೆಯಲ್ಲಿ ಅಸಮಾಧಾನ ಹೊರಹಾಕಿದ್ದಾರೆ.

ಹೆಚ್.ಡಿ.ದೇವೇಗೌಡ ಅವರ ನೇತೃತ್ವದ ಸಂಯುಕ್ತ ರಂಗ ಸರ್ಕಾರವು ಲೋಕಸಭೆ, ವಿಧಾನಸಭೆಗಳಲ್ಲಿ ಮಹಿಳೆಯರಿಗೆ 33% ಮೀಸಲು ನೀಡುವ ಕ್ರಾಂತಿಕಾರಿ ನಿರ್ಧಾರ ಕೈಗೊಂಡು ಸಂಸತ್ತಿನಲ್ಲಿ ಮಸೂದೆ ಮಂಡಿಸಿತ್ತು. ಅಂದು ಇದೇ ಕಾಂಗ್ರೆಸ್ ಮತ್ತು ಅದರ ಸಹಚರ ಶಕ್ತಿಗಳು ಆ ಪ್ರಯತ್ನವನ್ನು ಸಂಘಟಿತವಾಗಿ ವಿಫಲಗೊಳಿಸಿದ್ದವು.

ಇಂದು ಮಹಿಳೆಯರಿಗೆ ಆಗಿದ್ದ ಐತಿಹಾಸಿಕ ಅನ್ಯಾಯ ಸರಿಪಡಿಸಲು ಗೌರವಾನ್ವಿತ ಪ್ರಧಾನಿಗಳಾದ ನರೇಂದ್ರ ಮೋದಿ ಅವರು ದಿಟ್ಟಹೆಜ್ಜೆ ಇರಿಸಿದ್ದರು. ಪುನಾ ಅದೇ ಕಾಂಗ್ರೆಸ್ ಹಾಗೂ ಅದರ ಮಿತ್ರಪಕ್ಷಗಳು ಸೇರಿ ಸನ್ಮಾನ್ಯ ಮೋದಿ ಅವರ ಪ್ರಯತ್ನಕ್ಕೆ ತಡೆಯೊಡ್ಡಿವೆ ಎಂದು ಬೇಸರ ವ್ಯಕ್ತಪಡಿಸಿದ್ದಾರೆ.

ಮಹಿಳಾ ಮೀಸಲು ಮಸೂದೆಯನ್ನು ಸೋಲಿಸಿದ ಕೂಟದ ಶಕ್ತಿಗಳನ್ನು ರಾಷ್ಟ್ರದ ನಾರಿಶಕ್ತಿ ಎಂದಿಗೂ ಕ್ಷಮಿಸುವುದಿಲ್ಲ. ಇದು ಮಾತೃಶಕ್ತಿಗೆ ಆಗಿರುವ ಅಪಮಾನ. ಇದಕ್ಕೆ ಕಾರಣರಾದ ಎಲ್ಲರೂ ತಕ್ಕ ಶಾಸ್ತಿ ಅನುಭವಿಸಬೇಕಾಗುತ್ತದೆ ಎಂದು ಕಿಡಿಕಾರಿದ್ದಾರೆ.

ರಾಷ್ಟ್ರದ ನಾರಿಶಕ್ತಿಗೆ ನನ್ನ ಮನವಿ ಇಷ್ಟೇ, ನಿರಾಶೆ ಬೇಕಿಲ್ಲ.

ನರೇಂದ್ರ ಮೋದಿ ಅವರ ನಾಯಕತ್ವದಲ್ಲಿ ಮುಂದೊಂದು ದಿನ ನಿಮಗೆ ಅಗ್ರಮನ್ನಣೆ ಸಿಕ್ಕೇ ಸಿಗುತ್ತದೆ. 33% ಮಹಿಳಾ ಮೀಸಲು ಗುರಿ ಸಾಧಿಸುವುದು ಶತಸಿದ್ಧ ಎಂದು ಹೆಚ್‌ಡಿಕೆ ಪ್ರತಿಜ್ಞೆ ಮಾಡಿದ್ದಾರೆ.

## Women's Reservation Amendment Bill:' ಇದು ಪ್ರಜಾಪ್ರಭುತ್ವ, ಹಿಟ್ಲರ್ ಆಳ್ವಿಕೆಯಲ್ಲ'; ಕೇಂದ್ರದ ವಿರುದ್ಧ ಡಿಕೆ ಶಿವಕುಮಾರ್ ವಾಗ್ದಾಳಿ



ಬೆಂಗಳೂರು: ಶಾಸನಸಭೆಗಳಲ್ಲಿ ಮಹಿಳೆಯರಿಗೆ ಶೇ 33 ಮೀಸಲಾತಿ ಕಲ್ಪಿಸುವ 'ಮಹಿಳಾ ಮೀಸಲಾತಿ ತಿದ್ದುಪಡಿ ಮಸೂದೆಯ ಸಮಯ ಮತ್ತು ನಿರ್ವಹಣೆಯ ಬಗ್ಗೆ ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ಭಾನುವಾರ ಬಿಜೆಪಿ ನೇತೃತ್ವದ ಕೇಂದ್ರವನ್ನು ಟೀಕಿಸಿದ್ದು, ವಿರೋಧ ಪಕ್ಷಗಳನ್ನು ವಿಶ್ವಾಸಕ್ಕೆ ತೆಗೆದುಕೊಂಡಿಲ್ಲ. ಪ್ರಜಾಪ್ರಭುತ್ವ ಚೌಕಟ್ಟಿನಲ್ಲಿ ವ್ಯಾಪಕ ಸಮಾಲೋಚನೆಯಾಗಬೇಕು ಎಂದು ಹೇಳಿದರು.


'ಮಹಿಳಾ ಮೀಸಲಾತಿಯನ್ನು ಕಾಂಗ್ರೆಸ್ ನಿರಂತರವಾಗಿ ಬೆಂಬಲಿಸುತ್ತಾ ಬಂದಿದೆ. ಆದರೆ, ಈ ಮಸೂದೆಯನ್ನು ಮಂಡಿಸಿದ ರೀತಿಯನ್ನು ಆಕ್ಷೇಪಿಸುತ್ತಾ, ವಿರೋಧ ಪಕ್ಷಗಳೊಂದಿಗೆ ಸಾಕಷ್ಟು ಚರ್ಚೆ ನಡೆಸದೆ ಮಂಡಿಸಲಾಗಿದೆ. ಇದು ಪ್ರಜಾಪ್ರಭುತ್ವ; ಇದು ಹಿಟ್ಲರ್ ಶೈಲಿಯ ಆಳ್ವಿಕೆಯಲ್ಲ. ಅವರು ಚುನಾವಣೆಯ ಮಧ್ಯದಲ್ಲಿ ಇದನ್ನು ತರಲು ಸಾಧ್ಯವಿಲ್ಲ ಮತ್ತು ಇಡೀ ಕ್ಷೇತ್ರಗಳನ್ನು ಬದಲಿಸಲು ಪ್ರಯತ್ನಿಸುತ್ತಿದ್ದಾರೆ' ಎಂದು ಶಿವಕುಮಾರ್ ಇಲ್ಲಿ ಸುದ್ದಿಗಾರರಿಗೆ ತಿಳಿಸಿದರು.

'ಈ ಕ್ರಮವನ್ನು ಪಕ್ಷಾತೀತವಾಗಿ ಚರ್ಚಿಸಬೇಕಿತ್ತು. ಅವರು ಎಲ್ಲರನ್ನೂ ವಿಶ್ವಾಸಕ್ಕೆ ತೆಗೆದುಕೊಳ್ಳಬೇಕು, ಆದರೆ ಅವರು ಹಾಗೆ ಮಾಡಿಲ್ಲ. ಅದಕ್ಕಾಗಿಯೇ ವಿರೋಧ ಪಕ್ಷಗಳು ಉತ್ತಮ ಕೆಲಸ ಮಾಡಿವೆ. ಆದ್ದರಿಂದ, ಇದು ಇಂಡಿಯಾ ಮೈತ್ರಿಕೂಟದ ಗೆಲುವು' ಎಂದು ಕೆಪಿಸಿಸಿ ಅಧ್ಯಕ್ಷರೂ ಆಗಿರುವ ಶಿವಕುಮಾರ್ ಹೇಳಿದರು.

2029ರಲ್ಲಿ ಶಾಸಕಾಂಗಗಳಲ್ಲಿ ಮಹಿಳೆಯರಿಗೆ ಶೇ 33ರಷ್ಟು ಮೀಸಲಾತಿ ಕಲ್ಪಿಸುವ ಮತ್ತು ಲೋಕಸಭಾ ಸ್ಥಾನಗಳ ಸಂಖ್ಯೆಯನ್ನು 816ಕ್ಕೆ ಹೆಚ್ಚಿಸುವ ಸಂವಿಧಾನ ತಿದ್ದುಪಡಿ ಮಸೂದೆಯನ್ನು ಶುಕ್ರವಾರ ವಿರೋಧ ಪಕ್ಷಗಳು ಸೋಲಿಸಿದ ಬಿಜೆಪಿ ನೇತೃತ್ವದ ಕೇಂದ್ರ ಸರ್ಕಾರಕ್ಕೆ ಆಗಿರುವ ಹಿನ್ನಡೆ ಬಗ್ಗೆ ಅವರು ಮಾತನಾಡಿದರು.

ಲೋಕಸಭೆಯಲ್ಲಿ ಈ ಮಸೂದೆಯನ್ನು ಬೆಂಬಲಿಸಿ 298 ಸದಸ್ಯರು ಮತ ಚಲಾಯಿಸಿದರೆ, ವಿರುದ್ಧವಾಗಿ 230 ಸಂಸದರು ಮತ ಚಲಾಯಿಸಿದರು. ಮತ ಚಲಾಯಿಸಿದ 528 ಸದಸ್ಯರಲ್ಲಿ, ಮಸೂದೆ ಪಾಸ್ ಆಗಲು ಮೂರನೇ ಎರಡರಷ್ಟು ಬಹುಮತಕ್ಕೆ 352 ಮತಗಳು ಬೇಕಾಗಿದ್ದವು.

ಪ್ರಸ್ತಾವಿತ ಸಂವಿಧಾನ (131 ನೇ ತಿದ್ದುಪಡಿ) ಮಸೂದೆ ಲೋಕಸಭಾ ಸ್ಥಾನಗಳ ಸಂಖ್ಯೆಯನ್ನು 543 ರಿಂದ 816ಕ್ಕೆ ಹೆಚ್ಚಿಸಲು ಸೂಚಿಸಿದೆ. ಮಹಿಳಾ ಮೀಸಲಾತಿ ಕಾನೂನನ್ನು ಜಾರಿಗೆ ತರಲು ಈ ಹೆಚ್ಚಳ ಉದ್ದೇಶಿಸಲಾಗಿದೆ. 2029ರ ಸಾರ್ವತ್ರಿಕ ಚುನಾವಣೆಗೆ ಮುನ್ನ, 2011ರ ಜನಗಣತಿ ಆಧಾರದ ಮೇಲೆ ಚುನಾವಣಾ ಗಡಿಗಳನ್ನು ಮರುರೂಪಿಸಲಾಗುತ್ತದೆ.




## "ವರ್ಷದ ಕನ್ನಡಿಗ 2026" ರಾಜ್ಯ ಪ್ರಶಸ್ತಿಗೆ ಕೆಂಪಣ್ಣ ಚೌಕಶಿ ಭಾಜನ



ಘಟಪ್ರಭಾ: ಕನ್ನಡ ರಕ್ಷಣಾ ವೇದಿಕೆ ಸಂಸ್ಥಾಪಕ ರಾಜ್ಯಾಧ್ಯಕ್ಷ , ನ್ಯಾಯವಾದಿ ಕೆಂಪಣ್ಣ ಚೌಕಶಿ ಇವರು ಮಾಡಿದ ಸಾಧನೆ ಹಾಗೂ ಸಮಾಜ ಮುಖಿ ಕಾರ್ಯವನ್ನು ಗುರುತಿಸಿ ಬೆಂಗಳೂರಿನ ಸದಾಶಿವನಗರದಲ್ಲಿ ಹೈಡ್ ಪಾರ್ಕ್ ಆರ್ಚಡ್ಸ್ ಖಾಸಗಿ ಹೋಟೆಲ್‌ನಲ್ಲಿ ನಡೆದ ಸಮಾರಂಭದಲ್ಲಿ "ಚಿತ್ರ ಸಂತೆ" ಸಂಸ್ಥೆಯವರು "ವರ್ಷದ ಕನ್ನಡಿಗ 2026" ರಾಜ್ಯ ಪ್ರಶಸ್ತಿಯನ್ನು ನೀಡಿ ಗೌರವಿಸಿದರು

<u>**ಬೆಳಗಾವಿ ವಾರ್ತೆ ಘಟಪ್ರಭಾ:**</u> ಕನ್ನಡ ರಕ್ಷಣಾ ವೇದಿಕೆ ಸಂಸ್ಥಾಪಕ ರಾಜ್ಯಾಧ್ಯಕ್ಷ , ನ್ಯಾಯವಾದಿ ಕೆಂಪಣ್ಣ ಚೌಕಶಿ ಇವರು ಮಾಡಿದ ಸಾಧನೆ ಹಾಗೂ ಸಮಾಜ ಮುಖಿ ಕಾರ್ಯವನ್ನು ಗುರುತಿಸಿ ಬೆಂಗಳೂರಿನ ಸದಾಶಿವನಗರದಲ್ಲಿ ಹೈಡ್ ಪಾರ್ಕ್ ಆರ್ಚಡ್ಸ್ ಖಾಸಗಿ ಹೋಟೆಲ್‌ನಲ್ಲಿ ನಡೆದ ಸಮಾರಂಭದಲ್ಲಿ "ಚಿತ್ರ ಸಂತೆ" ಸಂಸ್ಥೆಯವರು "ವರ್ಷದ ಕನ್ನಡಿಗ 2026" ರಾಜ್ಯ ಪ್ರಶಸ್ತಿಯನ್ನು ನೀಡಿ ಗೌರವಿಸಿದರು.

ಈ ಸಂದರ್ಭದಲ್ಲಿ ಖ್ಯಾತ ಚಿತ್ರನಟಿ ಸಂಜನಾ ಗಲ್ರಾಣಿ, ಚಿತ್ರ ಸಂತೆಯ ವ್ಯವಸ್ಥಾಪಕ ನಿರ್ದೇಶಕ ಗಿರೀಶ್ ಪಿ ಗೌಡ, ಇವರು ರಾಜ್ಯ ಪ್ರಶಸ್ತಿ ಪತ್ರಗಳನ್ನು ನೀಡಿ ಸನ್ಮಾನಿಸಿ ಗೌರವಿಸಿದರು.



<u>**ಬೆಳಗಾವಿ ವಾರ್ತೆ ಗೋಕಾಕ:**</u> ಇಲ್ಲಿನ ಇನರವಿಲ್ಹ್ ಸಂಸ್ಥೆ ಹಾಗೂ ಸ್ವರ–ಸಂಗಮ ಇವುಗಳ ಸಂಯುಕ್ತಾಶ್ರಯದಲ್ಲಿ ಶನಿವಾರದಂದು ನಗರದ ರೋಟರಿ ಸಭಾಂಗಣದಲ್ಲಿ ನಾಗಸರಸ್ವತಿ ಆಶಾ ಭೋಸಲೆ ಸ್ಮರಣಾರ್ಥ ಆಯೋಜಿಸಿದ್ದ ಸ್ವರ ಶೃದ್ಧಾಂಜಲಿ ಕಾರ್ಯಕ್ರಮವನ್ನು ಗಣ್ಯರು ಉದ್ಘಾಟಿಸಿದರು.

ಈ ಸಂದರ್ಭದಲ್ಲಿ ಸಿರಿಗನ್ನಡ ಮಹಿಳಾ ವೇದಿಕೆಯ ರಾಜ್ಯಾಧ್ಯಕ್ಷೆ ಶ್ರೀಮತಿ ರಜನಿ ಜಿರಗ್ಯಾಳ, ಡಾ.ಶೃಸೃತ್ ಕಡಳಗೀಕರ, ಇನರವಿಲ್ಹ ಸಂಸ್ಥೆಯ ಅಧ್ಯಕ್ಷೆ ಅನುಪಾ ಕೌಶಿಕ್, ಸ್ವರಸಂಗಮದ ಅಧ್ಯಕ್ಷೆ ವಿದ್ಯಾ ಮಗದುಮ್ಮ ಇದ್ದರು.

# ಸತ್ಕಾರ್ಯಗಳು ಆಪತ್ಕಾಲದಲ್ಲಿ ಕಾಪಾಡುತ್ತವೆ: ಡಾ. ಗೀತಾ



**ಬೆಳಗಾವಿ ವಾರ್ತೆ ವಿಜಯಪುರ:** ನಾವು ಮಾಡಿದ ನಿಷ್ಠೆ, ಪ್ರಾಮಾಣಿಕತೆ, ನಿಸ್ವಾರ್ಥ ಸತ್ಕಾರ್ಯಗಳು ಆಪತ್ಕಾಲದಲ್ಲಿ ನಮ್ಮನ್ನು ಕಾಪಾಡುತ್ತವೆ ಎಂದು ಇಂಗ್ಲೆಂಡಿನ ಎಡಿನ್ಬರ್ಗ್ ವಿಶ್ವವಿ ದ್ಯಾಲಯದ ವೈದ್ಯೆ ಡಾ. ಗೀತಾ ಶೆಟ್ಟಿ ಹೇಳಿದ್ದಾರೆ.

ಗುರುವಾರ ನಗರದ ಬಿ.ಎಲ್.ಡಿ.ಇ ಆಸ್ಪತ್ರೆಯಲ್ಲಿ ಬಿ.ಎಲ್.ಡಿ.ಇ ಡೀಮ್ಡ್ ವಿಶ್ವವಿ ದ್ಯಾಲಯದ ಶ್ರೀ ಬಿ. ಎಂ. ಪಾಟೀಲ ವೈದ್ಯಕೀಯ ಮಹಾವಿದ್ಯಾಲಯದ ಶಸ್ತ್ರ ಚಿಕಿತ್ಸೆ ವಿಭಾಗದ ವತಿಯಿಂದ ಆಯೋಜಿಸಲಾದ ಕ್ಯಾನ್ಸರ್ ನೊಂದಿಗೆ ಹೋರಾಟ ಕುರಿತು ಅವರು ಅತಿಥಿ ಉಪನ್ಯಾಸ ನೀಡಿದರು.

ತಮ್ಮ ಸ್ವಂತ ಅನುಭವ ಹಂಚಿಕೊಂಡ ಅವರು, ಮೂರು ವರ್ಷಗಳ ಹಿಂದೆ ಸಾಮಾನ್ಯ ಬೇಧಿ, ಅತಿಸಾರದಿಂದ ಶುರುವಾದ ತಮ್ಮ ಕಾಯಿಲೆ ಉಲ್ಬಣಗೊಳ್ಳುತ್ತ, ಲಿವರ್ ವೈಫಲ್ಯ ಹಂತ ತಲುಪಿತ್ತು. ಎಷ್ಟೇ ನವೀನ ಮಾದರಿಯ ರೋಗ ಪತ್ತೆಯ ವಿಧಾನಗಳಿಂದಲೂ ಪ್ರಾಥಮಿಕ ಕಾರಣ ತಿಳಿಯಲು ತಿಂಗಳುಗಳೇ ಬೇಕಾದವು ಎಂದು ತಿಳಿಸಿದ ಅವರು ಅತೀ ವಿರಳವಾದ ಲಿವರ್ ಮೆಟಾಸ್ಟಾಟಿಕ್ ಕಾರ್ಸಿನಾಯ್ಡ್ ಟ್ಯುಮರ್ ನಿಂದ ಬಳಲುತ್ತಿದ್ದೆ. ಈ ಸಂದರ್ಭದಲ್ಲಿ ತಮ್ಮ ಪತಿ, ಪರಿವಾರ, ಸ್ನೇಹಬಳಗದ ತಮ್ಮ ಕಷ್ಟಕಾಲದಲ್ಲಿಯ ಸೇವೆ ಸಹಕಾರ ಅನನ್ಯವಾಗಿತ್ತು. ಲಿವರ್ ಕಸಿ ಮತ್ತು ಇತರ ಚಿಕಿತ್ಸೆಗಳನ್ನು ಭಾರತದಲ್ಲಿಯೇ ಪಡೆದಿದ್ದು, ಭಾರತೀಯ ವೈದ್ಯಕೀಯ ಚಿಕಿತ್ಸೆ ವಿಶ್ವದಲ್ಲೇ ಶ್ರೇಷ್ಠವಾಗಿದೆ ಎಂದು ಅವರು ಹೇಳಿದರು.

ಶಸ್ತ್ರ ಚಿಕಿತ್ಸೆ ವಿಭಾಗದ ಮುಖ್ಯಸ್ಥ ಡಾ. ಮಂಜುನಾಥ.ಕೋಟೆಣ್ಣವರ ಪ್ರಾಸ್ತಾವಿಕ 'ವಾಗಿ ಮಾತನಾಡಿ, ಡಾ. ಗೀತಾ ಶೆಟ್ಟಿ ಅವರು ತಾವು ಓದಿರುವ ಕಾಲೇಜಿನ ಹಿರಿಯ ವಿದ್ಯಾರ್ಥಿಯಾಗಿದ್ದು, ಹಿಂದೆಯೂ ಮತ್ತು ಮುಂದೆಯೂ ಎಂದೆಂದಿಗೂ ನಮಗೆ ಮಾದರಿಯಾಗಿದ್ದಾರೆ" ಎಂದು ಹೇಳಿದರು. ಪ್ರಾಧ್ಯಾಪಕಿ ಡಾ.ವಿಜಯಾ. ಪಾಟೀಲ ಮಾತನಾಡಿ, ಡಾ. ಗೀತಾ ಶೆಟ್ಟಿ ಅವರು ಮಾದರಿ ವೈದ್ಯ ಮತ್ತು ಮಾದರಿ ರೋಗಿಯೂ ಆಗಿದ್ದಾರೆ. ಅವರ ಧೈರ್ಯ, ಇಚ್ಛಾಶಕ್ತಿ ಮತ್ತು ಸೇವಾ ಉತ್ಸುಕತೆಗಳು ಮೆಚ್ಚುವಂಥವು. ಎರಡು ವರ್ಷ ಕ್ಯಾನ್ಸರ್ ರೋಗದೊಂದಿಗೆ ಹೋರಾಡಿ ಜಯಿಸಿದ ಅವರು ವಿಶ್ವವಿಖ್ಯಾತ ಸ್ತನ ಶಸ್ತ್ರಚಿಕಿತ್ಸಕರಾಗಿದ್ದು, ವಿಜಯಪುರದ ಹೆಮ್ಮೆಯ ಸುಪುತ್ರಿ ಎಂದು ಹೇಳಿದರು.

ಬಿ.ಎಲ್.ಡಿ.ಇ ಮೆಡಿಕಲ್ ಕಾಲೇಜಿನ ವೈಜ್ಞಾನಿಕ ಶೈಕ್ಷಣಿಕ ಮತ್ತು ಸಂಶೋಧನೆ ಸಮಿತಿ(ಖಂಖಖ) ಹಾಗೂ ವಿಜಯಪುರ ಜಿಲ್ಲಾ ಶಸ್ತ್ರ ಚಿಕಿತ್ಸಕರ ಸಂಘದ ಸಹಯೋಗದಲ್ಲಿ ನಡೆದ ಈ ಕಾರ್ಯಕ್ರಮದಲ್ಲಿ ಮೆಡಿಕಲ್ ಕಾಲೇಜಿನ ಪ್ರಿನ್ಸಿಪಾಲ್ ಡಾ. ತೇಜಸ್ವಿನಿ.ವಲ್ಲಭ, ಹಿರಿಯ ಉಪ ಪ್ರಾಚಾರ್ಯ ಡಾ. ವಿಜಯಕುಮಾರ ಟಿ. ಕಲ್ಯಾಣಪ್ಪಗೋಳ, ವೈದ್ಯಕೀಯ ಅಧೀಕ್ಷಕ ಡಾ. ಸಂಜೀವ.ಬೆಂಟೂರ, ಆರ್ ಎಂಡ್ ಡಿ ವಿಭಾಗದ ಡೀನ್ ಡಾ. ಎಂ. ಎಂ. ಪಾಟೀಲ, ಎಸ್. ಎ. ಆರ್. ಎಸ್ ಚೇರಮನ್ ಡಾ. ಲತಾದೇವಿ ಎಚ್. ಟಿ, ಜಿಲ್ಲಾ ಶಸ್ತ್ರ ಚಿಕಿತ್ಸಕರ ಸಂಘದ ಕಾರ್ಯದರ್ಶಿ ಡಾ. ರಮಾಕಾಂತ ಬಳೂರಕರ, ಜಿಲ್ಲಾಸ್ಪತ್ರೆಯ ಹಿರಿಯ ಶಸ್ತ್ರ ಚಿಕಿತ್ಸಕ ಡಾ. ಆನಂದ ಝುಳಕಿ, ಡಾ. ವಿಜಯ.ಕಟ್ಟಿ, ಡಾ. ಗಿರೀಶ ಕುಲ್ಲೊಳ್ಳಿ, ಡಾ. ವಿಕ್ರಂ ಸಿಂದಗಿಕರ, ಡಾ. ದೀಪಕ ಚವ್ಹಾಣ, ಸ್ನಾತಕ ಹಾಗೂ ಸ್ನಾತಕೋತ್ತರ ವೈದ್ಯಕೀಯ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಸುಸೂತ್ರ ಪರೀಕ್ಷೆ ನಡೆಸಲು ಎಡಿಸಿ ಸೂಚನೆ




**ಬೆಳಗಾವಿ ವಾರ್ತೆ ವಿಜಯಪುರ:** 2026ನೇ ಸಾಲಿನ ಸಿಇಟಿ ಪ್ರವೇಶ ಪರೀಕ್ಷೆಗಳು ಏ. 22 ರಿಂದ 24 ರವರೆಗೆ ಜಿಲ್ಲೆಯ 30 ಪರೀಕ್ಷಾ ಕೇಂದ್ರಗಳಲ್ಲಿ ನಡೆಯಲಿದ್ದು, ಪರೀಕ್ಷಾ ಕಾರ್ಯಗಳಲ್ಲಿ ಯಾವುದೇ ಲೋಪವಾಗದಂತೆ ಸುಸೂತ್ರವಾಗಿ ನಡೆಸುವಂತೆ ಅಪರ ಜಿಲ್ಲಾಧಿಕಾರಿ ಡಾ. ಔದ್ರಾಮ ಅವರು ಸೂಚಿಸಿದರು.

ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಶನಿವಾರ ಸಿಇಟಿ ಪರೀಕ್ಷೆಗೆ ಸಂಬಂಧಿಸಿದ ಪರೀಕ್ಷಾ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಪರೀಕ್ಷೆಯು ಎರಡು ಅವಧಿಯಲ್ಲಿ ನಡೆಯಲಿದ್ದು, ಜಿಲ್ಲೆಯ ಒಟ್ಟು 30 ಪರೀಕ್ಷಾ ಕೇಂದ್ರಗಳಲ್ಲಿ ಜರುಗಲಿದ್ದು,13,359 ಅಭ್ಯರ್ಥಿಗಳು ಪರೀಕ್ಷೆಗೆ ನೋಂದಣಿ ಮಾಡಿಕೊಂಡಿದ್ದಾರೆ. ಯಾವುದೇ ಸಮಸ್ಯೆ ಬಾರದ ರೀತಿಯಲ್ಲಿ ಪರೀಕ್ಷೆಗೆ ನಿಯೋಜಿತ ಅಧಿಕಾರಿಗಳು ಮುಂಜಾಗ್ರತೆಯಿಂದ ಪರೀಕ್ಷಾ ನಿಯಮಗಳನ್ವಯ ಕಾರ್ಯ ನಿರ್ವಹಿಸುವಂತೆ ಸೂಚನೆ ನೀಡಿದರು. ಪ್ರತಿ ಪರೀಕ್ಷಾ ಕೇಂದ್ರಕ್ಕೆ ಓರ್ವ ವೀಕ್ಷಕರಂತೆ ಒಟ್ಟು 30 ವೀಕ್ಷಕರನ್ನು ನೇಮಿಸಿದೆ. ಪರೀಕ್ಷಾ ಕೇಂದ್ರಕ್ಕೆ ನಿಯೋಜಿಸಲಾದ ವೀಕ್ಷಕರು ಪರೀಕ್ಷೆ ಪ್ರಾರಂಭವಾಗುವ ಸಮಯಕ್ಕಿಂತ ಒಂದು ಗಂಟೆ ಮೊದಲು ಪರೀಕ್ಷಾ ಕೇಂದ್ರದಲ್ಲಿ ಹಾಜರಿರಬೇಕು.ಪ್ರತಿ ಪರೀಕ್ಷಾ ಕೇಂದ್ರಕ್ಕೆ ಓರ್ವ ಉಪ ಮುಖ್ಯ ಅಧಿಕ್ಷಕರು,ಓರ್ವ ಪ್ರಶ್ನೆಪತ್ರಿಕೆ ಪಾಲಕರು ಹಾಗೂ ಓರ್ವ ವಿಶೇಷ ಸ್ಥಾನಿಕ ಜಾಗೃತದಳ ಸದಸ್ಯರನ್ನು ನೇಮಿಸಿದೆ. ಪರೀಕ್ಷಾ ನಡೆಯುವ ಪರೀಕ್ಷಾ ಕೇಂದ್ರಗಳ ಸುತ್ತಲಿನ 200ಮೀ.ಪ್ರದೇಶವನ್ನು ನಿಷೇಧಿತ ಪ್ರದೇಶ ಎಂದು ಆದೇಶಿಸಲಾಗಿದೆ. ಎಲ್ಲಾ ಪರೀಕ್ಷಾ ಕೇಂದ್ರಗಳಿಗೆ ಮುಂಜಾಗ್ರತಾ ಕ್ರಮವಾಗಿ ಸೂಕ್ತ ಬಂದೋಬಸ್ತ್ ಕೈಗೊಳ್ಳಲು ಸೂಚಿಸಲಾಯಿತು.

ಈ ಸಂದರ್ಭದಲ್ಲಿ ಜಿಲ್ಲಾ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ರಾಮನಗೌಡ ಹಟ್ಟಿ, ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪ ನಿರ್ದೇಶಕ ಚಂದ್ರಶೇಖರ ಹೊಸಮನಿ, ಉಪ ಅಧೀಕ್ಷಕರು, ಮಾರ್ಗಾಧಿಕಾರಿಗಳು, ವೀಕ್ಷಕರು ಸೇರಿದಂತೆ ಪರೀಕ್ಷೆಗೆ ನಿಯೋಜಿತ ಅಧಿಕಾರಿಗಳು ಉಪಸ್ಥಿತರಿದ್ದರು.

# ಮಾನವೀಯತೆ ಮೆರೆದ ಕಾರ್ಮಿಕ ಮುಖಂಡ ಇಬ್ರಾಹಿಂ ಮುಲ್ಲಾ: ನಿರ್ಗತಿಕ ವೃದ್ಧೆಯರ ಕುಟುಂಬಕ್ಕೆ ನೆರವು

**ಬೆಳಗಾವಿ ವಾರ್ತೆ ಮುದ್ದೇಬಿಹಾಳ:** ಸಮಾಜದಲ್ಲಿ ಸಿರಿವಂತಿಕೆಗಿಂತ ಸಂಸ್ಕಾರವಂತ ಮನಸ್ಸುಗಳು ಮುಖ್ಯ ಎಂಬುದನ್ನು ಕಾರ್ಮಿಕ ಮುಖಂಡ ಇಬ್ರಾಹಿಂ ಮುಲ್ಲಾ ಅವರು ಸಾಬೀತು ಪಡಿಸಿದ್ದಾರೆ. ಕುಟುಂಬ ದವರಿಂದಲೇ ನಿರ್ಲಕ್ಷ್ಯಕ್ಕೆ ಒಳಗಾಗಿ, ಹಸಿವಿನಿಂದ ಕಂಗಾಲಾಗಿದ್ದ ಪಟ್ಟಣದ ವೃದ್ಧೆಯರ ಕುಟುಂಬಕ್ಕೆ ದಿನಸಿ ಹಾಗೂ ಆರ್ಥಿಕ ನೆರವು ನೀಡುವ ಮೂಲಕ ಅವರು ನಿಜವಾದ ಮಾನವೀಯತೆ ಮೆರೆದಿದ್ದಾರೆ.

ಪಟ್ಟಣದ ಕಿಲ್ಲಾ ಭಾಗದ ನಾಗಪ್ಪನ ಕಟ್ಟೆಯ ಬಳಿ ವಾಸಿಸುವ ಶಕುಂತಲಾ ನಂದರಗಿ (80) ಎಂಬ ವೃದ್ಧೆ ಹಾಗೂ ಅವರ ಇಬ್ಬರು ಹೆಣ್ಣು ಮಕ್ಕಳಾದ ಸುಮಿತ್ರಾ ಮತ್ತು ಮಂಜುಳಾ (50-60 ವರ್ಷ) ಅವರ ಬದುಕು ಅತ್ಯಂತ ದಯನೀಯವಾಗಿತ್ತು. ಮನೆಯಲ್ಲಿ ಯಾರೂ ದುಡಿಯುವವರಿಲ್ಲದೆ, ಇಳಿ ವಯಸ್ಸಿನಲ್ಲಿ ತುತ್ತು ಅನ್ನಕ್ಕೂ ಪರದಾಡುವ ಸ್ಥಿತಿ ನಿರ್ಮಾಣವಾಗಿತ್ತು. ಈ ಕುಟುಂಬದ ಕಷ್ಟವನ್ನು ಕಿಲ್ಲಾ ನಿವಾಸಿ ಮಹಬೂಬ ಜಮಾದಾರ ಅವರು ಇಬ್ರಾಹಿಂ ಮುಲ್ಲಾ ಅವರ ಗಮನಕ್ಕೆ ತಂದಿದ್ದರು.

ವಿಷಯ ತಿಳಿಯುತ್ತಿದ್ದಂತೆಯೇ ಕಾರ್ಯಪ್ರವೃತ್ತರಾದ ಇಬ್ರಾಹಿಂ ಮುಲ್ಲಾ ಅವರು, ಆ ಕುಟುಂಬಕ್ಕೆ ದೀರ್ಘಕಾಲಕ್ಕೆ ಸಾಕಾಗುವಷ್ಟು ಅಕ್ಕಿ, ಎಣ್ಣೆ, ಬೇಳೆ ಸೇರಿದಂತೆ ದಿನಸಿ ಕಿಟ್ ನೀಡಿದ್ದಲ್ಲದೆ, ಕೈಲಾದ ಆರ್ಥಿಕ ಸಹಾಯವನ್ನೂ ಮಾಡಿ ಧೈರ್ಯ ತುಂಬಿದರು.

ಈ ವೇಳೆ ಮಾತನಾಡಿದ ಕೆಪಿಟಿಸಿಎಲ್ ನೌಕರರ ಸಹಕಾರ ಸಂಘದ ನಿರ್ದೇಶಕ ಹುಸೇನ್ ನಾಯ್ಕೋಡಿ, ಬಸವಣ್ಣನವರ ಕಾಯಕ ಸಿದ್ಧಾಂತ ಹಾಗೂ ಪೈಗಂಬರರ ತತ್ವಗಳನ್ನು ಬದುಕಿನಲ್ಲಿ ಅಳವಡಿಸಿಕೊಂಡಿರುವ ಮುಲ್ಲಾ ಅವರು, ಸಂಕಷ್ಟದಲ್ಲಿರುವವರ ಕಣ್ಣೀರು ಒರೆಸುವ ಮೂಲಕ ಮಾದರಿಯಾಗಿದ್ದಾರೆ ಎಂದರು.



ನಂತರ ಮಾತನಾಡಿದ ಇಬ್ರಾಹಿಂ ಮುಲ್ಲಾ, "ಪಕ್ಕದ ಮನೆಯವರು ಹಸಿದಿರುವಾಗ ನಾವು ಹೊಟ್ಟೆತುಂಬ ಉಣ್ಣುವುದು ಧರ್ಮವಲ್ಲ ಎಂದು ಖುರಾನ್ ಸಾರುತ್ತದೆ. ಸಮಾಜದ ಸಂಘ-ಸಂಸ್ಥೆಗಳು ಇಂತಹ ನಿರ್ಗತಿಕ ಕುಟುಂಬಗಳ ನೆರವಿಗೆ ಧಾವಿಸಬೇಕು ಎಂದು ಕರೆ ನೀಡಿದರು.

ಈ ಸಂದರ್ಭದಲ್ಲಿ ಮಹೆಬೂಬ ಜಮಾದಾರ, ಲಾಳೀಮಶ್ಯಾಕ ನಾಯ್ಕೋಡಿ, ಹಾಜಿ ಸಾತಿಹಾಳ ಸೇರಿದಂತೆ ಓಣಿಯ ಪ್ರಮುಖರು ಉಪಸ್ಥಿತರಿದ್ದರು.

# ಹುಬ್ಬಳ್ಳಿಯ ಅಂಧ ಬಾಲಕರ ಸರಕಾರಿ ಪಾಠಶಾಲೆಗೆ ಪ್ರವೇಶ ಆರಂಭ

ಗದಗ : ಅಂಧ ಬಾಲಕರ ಸರಕಾರಿ ಪಾಠಶಾಲೆ, ಹುಬ್ಬಳ್ಳಿ ಸಂಸ್ಥೆಯ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ಆಡಳಿತದಲ್ಲಿ ಅಂಧ ಬಾಲಕರಿಗಾಗಿ ನಡೆಯುತ್ತಿರುವ ಸಂಪೂರ್ಣ ಉಚಿತ ಶಿಕ್ಷಣ ನೀಡುವ ವಸತಿಯುತ ಶಾಲೆಯಾಗಿರುತ್ತದೆ. ಸುಸಜ್ಜಿತ ಕಟ್ಟಡ ಮತ್ತು ಸಕಲ ಸೌಲಭ್ಯಗಳಿರುವ ಸರಕಾರಿ ಶಾಲೆಯಾಗಿದೆ ಮತ್ತು ಅಂಧ ಮಕ್ಕಳಿಗೆ ಅನುಕೂಲಕರವಾದ ವ್ಯವಸ್ಥೆಗಳನ್ನು ಒಳಗೊಂಡಿರುತ್ತದೆ. ಶಾಲೆಯನ್ನು 2025-26ನೇ ಶೈಕಣಿಕ ವರ್ಷಗಳಿಂದ ಪ್ರಾಢಶಾಲೆಯಾಗಿ ಉನ್ನತ್ತೀಕರಿಸಿದ್ದು, ದಿನಾಂಕ:16/04/2026 ರಿಂದ 1 ರಿಂದ 10ನೇ ವರ್ಗಗಳಿಗೆ ಪ್ರವೇಶವನ್ನು ಪ್ರಾರಂಭಿಸಲಾಗಿರುತ್ತದೆ ಎಂದು ಜಿಲ್ಲಾ ವಿಕಲಚೇತನರ ಕಲ್ಯಾಣಾಧಿಕಾರಿ ಕೆ.ಮಹಾಂತೇಶ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. (ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಿ ದೂರವಾಣಿ ಸಂಖ್ಯೆ:9964439770)

# ಹಂಪಿಯಲ್ಲಿ ವಿಶ್ವ ಪರಂಪರೆ ದಿನಾಚರಣೆ: ಇವೊಲ್ವ್ ಬ್ಯಾಕ್ ರೆಸಾರ್ಟ್ ಮತ್ತು ಪುರಾತತ್ವ ಇಲಾಖೆಯಿಂದ ಸ್ವಚ್ಛತಾ ಅಭಿಯಾನ



**ಬೆಳಗಾವಿ ವಾರ್ತೆ ವಿಜಯನಗರ (ಹೊಸಪೇಟೆ):** ವಿಶ್ವ ಪರಂಪರೆ ದಿನಾಚರಣೆಯ ಅಂಗವಾಗಿ ಕಮಲಾಪುರದ ಇವೊಲ್ವ್ ಬ್ಯಾಕ್ ರೆಸಾರ್ಟ್ (Evolve Back Resort) ಸಿಬ್ಬಂದಿ ಮತ್ತು ಭಾರತೀಯ ಪುರಾತತ್ವ ಸರ್ವೇಕ್ಷಣಾ ಇಲಾಖೆಯ (ಂಖಿಖ) ಹಂಪಿ ವೃತ್ತದ ಅಧಿಕಾರಿಗಳು ಹಾಗೂ ಸಿಬ್ಬಂದಿ ಜಂಟಿಯಾಗಿ ಹಂಪಿಯ ಪ್ರಸಿದ್ಧ ಸ್ಮಾರಕಗಳಾದ ರಾಣಿ ಸ್ನಾನಗೃಹ (Queen's Bath) ಮತ್ತು ರಾಯಲ್ ಸೆಂಟರ್ ಆವರಣದಲ್ಲಿ ಶನಿವಾರ ಬೃಹತ್ ಸ್ವಚ್ಛತಾ ಅಭಿಯಾನ ಹಮ್ಮಿಕೊಳ್ಳಲಾಗಿತ್ತು.

ಈ ಸ್ವಚ್ಛತಾ ಕಾರ್ಯಕ್ರಮದಲ್ಲಿ ಸುಮಾರು 150 ರಿಂದ 200 ಕೆ ಜಿ ಪ್ಲಾಸ್ಟಿಕ್ ಹಾಗೂ ಇನ್ನಿತರ ತ್ಯಾಜ್ಯ ಸಂಗ್ರಹಿಸಿ ವೈಜ್ಞಾನಿಕವಾಗಿ ವಿಲೇವಾರಿ ಮಾಡಲಾಯಿತು. ಸ್ಮಾರಕಗಳನ್ನು ವೀಕ್ಷಿಸಲು ಬಂದ ಪ್ರವಾಸಿಗರಿಗೆ ಮತ್ತು ಸ್ಥಳೀಯರಿಗೆ ಪ್ಲಾಸ್ಟಿಕ್ ಬಳಕೆ ನಿಲ್ಲಿಸುವಂತೆ ಹಾಗೂ ಸ್ಮಾರಕಗಳ ಪರಿಸರ ಸ್ವಚ್ಛವಾಗಿಡುವಂತೆ ಜಾಗೃತಿ ಮೂಡಿಸಲಾಯಿತು.

ಹಂಪಿಯನ್ನು ಸಂಪೂರ್ಣವಾಗಿ ಪ್ಲಾಸ್ಟಿಕ್ ಮುಕ್ತ ನಗರವನ್ನಾಗಿ ಮಾಡುವುದು ಅಭಿಯಾನದ ಉದ್ದೇಶ ಎಂದು ಅಧಿಕಾರಿಯೊಬ್ಬರು ಆಶಯ ವ್ಯಕ್ತಪಡಿಸಲಾಯಿತು.

ಅಭಿಯಾನದಲ್ಲಿ ಇವೊಲ್ವ್ ಬ್ಯಾಕ್ ರೆಸಾರ್ಟ್‌ನ ಜನರಲ್ ಮ್ಯಾನೇಜರ್ ಬಿಪಿನ್ ಬಿದ್ದಪ್ಪ, ಪುರಾತತ್ವ ಇಲಾಖೆಯ ಡೆಪ್ಯುಟಿ ಸೂಪರಿಂಟೆಂಡೆಂಟ್ ಆರ್ಕಿಯಾಲಜಿಸ್ಟ್ ಡಾ. ದೇವರಾಜ್ ಎಸ್.ಎಂ., ಸಹಾಯಕ ಅಧೀಕ್ಷಕ ಡಾ. ಜೆ.ರವಿಕುಮಾರ್ ಸೇರಿದಂತೆ ಹಲವರು ಪಾಲ್ಗೊಂಡಿದ್ದರು.

# ಘಟಪ್ರಭಾ ಎಡದಂಡೆ ಕಾಲುವೆಗೆ ನೀರು ಬಿಡಲು ಆಗ್ರಹಿಸಿ ಪ್ರತಿಭಟನೆ



ಘಟಪ್ರಭಾ: ನೀರು ಬಿಡಲು ಆಗ್ರಹಿಸಿ ಅಧಿಕಾರಿಗಳ ಜತೆ ಚರ್ಚಿಸುತ್ತಿರುವ ರೈತ ಸಂಘದ ಅಧ್ಯಕ್ಷ ಚೂನಪ್ಪ ಪೂಜಾರಿ.

**ಬೆಳಗಾವಿ ವಾರ್ತೆ ಘಟಪ್ರಭಾ:** ಘಟಪ್ರಭಾ ಎಡದಂಡೆ ಕಾಲುವೆಗೆ ನೀರು ಬಿಡಲು ಆಗ್ರಹಿಸಿ ರಾಜ್ಯ ರೈತ ಸಂಘದ ಅಧ್ಯಕ್ಷ ಚೂನಪ್ಪ ಪೂಜಾರಿ ನೇತ್ರತ್ವದಲ್ಲಿ ಇಂದು ಘಟಪ್ರಭಾ ಎಡದಂಡೆ ಕಾಲುವೆಗೆ ಇಳಿದು ರೈತರು ಪ್ರತಿಭಟನೆ ನಡೆಸಿದರು.

ಘಟಪ್ರಭಾದಲ್ಲಿ ಎಡದಂಡೆ ಕಾಲುವೆ ಮೇಲಿನ ಬ್ರಿಜ್ ತಿಂಗಳ ಹಿಂದೆ ಶಿಥಿಲಗೊಂಡ ಕಾರಣ ಹಳೆ ಬ್ರಿಜ್ ತೆರವುಗೊಳಿಸಿ ಕಳೆದ ಒಂದು ತಿಂಗಳಿನಿಂದ 5 ಕೋಟಿ ವೆಚ್ಚದಲ್ಲಿ ನೂತನ ಬ್ರಿಜ್ ಕಾಮಗಾರಿ ಬರದಿಂದ ನಡೆಯುತಿತ್ತು. ಪ್ರಯಾಣಿಕರ ಅನುಕೂಲಕ್ಕಾಗಿ ಹಳೆ ಸೇತುವೆ ಪಕ್ಕದಲ್ಲಿ ಎಡದಂಡೆ ಕಾಲುವೆ ಮೇಲೆ ಪೈಪಗಳನ್ನು ಹಾಕಿ ತಾತ್ಕಾಲಿಕ ರಸ್ತೆ ಮಾಡಲಾಗಿತ್ತು. ಇದರಿಂದ ಕಾಲುವೆಗೆ ನೀರು ಬಿಡಲು ಅಧಿಕಾರಿಗಳಿಗೆ ಸಾಧ್ಯವಾಗಲಿಲ್ಲ ಆದರೆ ಇಂದು ರೈತರು ರೊಚ್ಚಿಗೆದ್ದು ತಾತ್ಕಾಲಿಕವಾಗಿ ನಿರ್ಮಿಸಿದ ರಸ್ತೆಯನ್ನು ತೆರವುಗೊಳಿಸಿ ನೀರು ಬಿಡಲು ಆಗ್ರಹಿಸಿದರು. ಒಂದು ಹಂತದಲ್ಲಿ ರೈತರೆ ಕಾಲುವೆಗೆ ಇಳಿದು ತಾತ್ಕಾಲಿಕ ರಸ್ತೆಯನ್ನು ತೆರವುಗೊಳಿಸಲು ಪ್ರಯತ್ನಿಸಿದರು ಆ ಸಂದರ್ಭದಲ್ಲಿ ರೈತರನ್ನು ಸಮಾಧಾನಪಡಿಸಲು ಅಧಿಕಾರಿಗಳು ಹಾಗೂ ಪೊಲೀಸರು ತುಂಬಾ ಪ್ರಯತ್ನಪಟ್ಟರು ಯಾರ ಮಾತನ್ನು ಯಾರು ಕೇಳುವ ಪರಿಸ್ಥಿತಿ ಇಲ್ಲದಿದ್ದ ಕಾರಣ ಹೈಡ್ರಾಮವೆ ನಡೆಯಿತು. ರೈತ ಸಂಘದ ಅಧ್ಯಕ್ಷ ಚೂನಪ್ಪ ಪೂಜಾರಿ ಅಧಿಕಾರಿಗಳನ್ನು ತೀವ್ರವಾಗಿ ತೆಗೆದುಕೊಂಡು ನೀವು 5 ಕೋಟಿ ವೆಚ್ಚದಲ್ಲಿ ರಸ್ತೆ ನಿರ್ಮಾಣ ಮಾಡುತ್ತಿದ್ದೀರಿ ಆದರೆ ಕಳೆದ ಒಂದು ತಿಂಗಳಿನಿಂದ ರೈತರ ಬೆಳೆಗೆ ನೀರು ಇಲ್ಲದೆ ಕೋಟ್ಯಾಂತರ ರೂಪಾಯಿ ಬೆಳೆ ಹಾನಿಯಾಗುತ್ತಿದೆ. ದನ-ಕರುಗಳಿಗೆ ನೀರು ಇಲ್ಲದೆ ಸಾಯುತ್ತಿದೆ ಎಂದು ಹೇಳಿದರು.

ಬ್ರಿಜ್ ಶಿಥಿಲಗೊಂಡ ನಂತರ ಜಿಲ್ಲಾ ಉಸ್ತುವಾರಿ ಹಾಗೂ ಲೋಕೋಪಯೋಗಿ ಸಚಿವರಾದ ಸತೀಶ ಜಾರಕಿಹೊಳಿಯವರೆ ನೂತನ ಬ್ರಿಜ್ ತಕ್ಷಣ ಮಾಡಿಸಲು ಅಧಿಕಾರಿಗಳಿಗೆ ಆದೇಶಿಸಿ 45 ದಿನಗಳಲ್ಲಿ ಪೂರ್ಣಗೊಳಿಸಲು ಸೂಚಿಸಿದ್ದರು ಹಾಗೂ ಕಾಮಗಾರಿ ಪ್ರಾರಂಭಗೊಂಡ ನಂತರ ಸ್ಥಳಕ್ಕೆ ಸಚಿವರು ಈಗಾಗಲೆ 4 ಬಾರಿ ಭೇಟಿ ನೀಡಿ ಪರಿಶೀಲಿಸಿದ್ದರು. ರಸ್ತೆ ಕಾಮಗಾರಿ ಇನ್ನು ಒಂದು ವಾರದಲ್ಲಿ ಮುಗಿಯುತ್ತಿರುವುದರಿಂದ ಒಂದು ವಾರದ ನಂತರ ನೀರು ಬಿಡುವ ಭರವಸೆಯನ್ನು ಅಧಿಕಾರಿಗಳು ನೀಡಿದರು ರೈತರು ಒಪ್ಪದೆ ರಸ್ತೆ ತಡೆದು ಪ್ರತಿಭಟನೆ ನಡೆಸಿದ ಕಾರಣ ಪ್ರಯಾಣಿಕರ ಅನುಕೂಲಕ್ಕಾಗಿ ತಾತ್ಕಾಲಿಕವಾಗಿ ನಿರ್ಮಿಸಿದ ರಸ್ತೆಯನ್ನು ನಾಳೆಯಿಂದಲೆ ತೆರವುಗೊಳಿಸಲು ಅಧಿಕಾರಿಗಳು ಸೂಚಿಸಿದ್ದು ಮುಂದಿನ 4 ದಿನ ಪ್ರಯಾಣಿಕರು ಬೇರೆ ರಸ್ತೆಯಲ್ಲಿ ಪ್ರಯಾಣಿಸಲು ಸೂಚನೆ ನೀಡಿದರು. ಹಾಗೂ ಜಿಲ್ಲಾಧಿಕಾರಿಗಳು ದಿ.20ರಿಂದ ನೀರು ಬಿಡಲು ಭರವಸೆ ನೀಡಿದ್ದರಿಂದ ಸುಮಾರು 4 ಗಂಟೆಯ ಪ್ರತಿಭಟನೆಯ ನಂತರ ರೈತರು ಪ್ರತಿಭಟನೆಯನ್ನು ವಾಪಸು ಪಡೆದರು.

ಈ ಸಂದರ್ಭದಲ್ಲಿ ತಾಲೂಕಾ ದಂಡಾಧಿಕಾರಿ ಡಾ॥ ಮೋಹನ ಭಸ್ಮೆ, ಘಟಪ್ರಭಾ ಠಾಣೆಯ ಪಿಐ ಎಚ್.ಡಿ.ಮುಲ್ಲಾ, ಮೂಡಲಗಿ ಸಿಪಿಐ ಶ್ರೀಶೈಲ ಬ್ಯಾಕೂಡ, ಗೋಕಾಕ ಸಿಪಿಐ ಸುರೇಶ ಬಾಬು, ಸಂಕೇಶ್ವರ ಸಿಪಿಐ, ಮತ್ತು ಸುತ್ತ-ಮುತ್ತಲಿನ ಪೊಲೀಸ್ ಠಾಣೆಯ ಪಿಎಸ್ಐ, ನೀರಾವಾರಿ ಇಲಾಖೆಯ ಅಧಿಕಾರಿ ನಾಗೇಶ ಕೊಲ್ಕಾರ ಮತ್ತು ದುಂಡಪ್ಪ ಜೊಕ್ಕಾನಟ್ಟಿ, ಸಚಿವರ ಅಪ್ತ ಸಹಾಯಕ ಶಿವು ಪಾಟೀಲ, ಪಿಡಬ್ಲ್ಯೂಡಿ ಅಧಿಕಾರಿ ರಾಮಚಂದ್ರ ಅವತಾಡೆ ಹಾಜರಿದ್ದರು ಹಾಗೂ ರಾಯಬಾಗ, ಹುಕ್ಕೇರಿ, ಮೂಡಲಗಿ ಭಾಗದ ನೂರಾರು ರೈತರು ಪ್ರತಿಭಟನೆಗೆ ಆಗಮಿಸಿದ್ದರು.



ಘಟಪ್ರಭಾ: ತಾತ್ಕಾಲಿಕ ರಸ್ತೆ ತೆರವುಗೊಳಿಸಲು ಕಾಲುವೆಗೆ ಇಳಿದ ರೈತರು.

# ವಿವಿಧ ಸೌಲಭ್ಯಕ್ಕಾಗಿ ಅರ್ಜಿ ಆಹ್ವಾನ

ಧಾರವಾಡ: 2026-27 ನೇ ಸಾಲಿನ ಪುರಸಭೆ ಹಾಗೂ ಎಸ್‌ಎಫ್‌ಸಿ ಶೇ. 24.10 ಯೋಜನೆಯಡಿ ನವಲಗುಂದ ಪುರಸಭೆಯ ವ್ಯಾಪ್ತಿಯಲ್ಲಿ ವಾಸಿಸುತ್ತಿರುವ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದವರಿಗೆ ಅಡಿಗೆ ಅನಿಲ ಸಂಪರ್ಕ ಕಲ್ಪಿಸುವುದು ಹಾಗೂ ಶೇ. 7.25 ಯೋಜನೆಯಡಿ ಇತರೆ ಬಡಜನರಿಗೆ ಅಡುಗೆ ಅನಿಲ ಸಂಪರ್ಕ ಹಾಗೂ ಶೇ.5 ಯೋಜನೆಯಡಿ ವಿಕಲಚೇತನರಿಗೆ ಅಡುಗೆ ಸಂಪರ್ಕ ಸೌಲಭ್ಯ ಹಾಗೂ ವೈಧ್ಯಕೀಯ ವೆಚ್ಚಕ್ಕಾಗಿ ಅರ್ಜಿ ಅಹ್ವಾನಿಸಲಾಗಿದೆ.

ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ಹಾಗೂ ಇತರೆ ಬಡಜನರು ಹಾಗೂ ಅಂಗವಿಕಲರು ಮೇ 15, 2026 ರೊಳಗಾಗಿ ಅಗತ್ಯ ದಾಖಲೆಗಳೊಂದಿಗೆ ಅರ್ಜಿ ಸಲ್ಲಿಸಬಹುದು. ನಂತರ ಬಂದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ. ಸಂಬಂಧಿಸಿದ ದಾಖಲಾತಿ ಇಲ್ಲದ ಅರ್ಜಿಗಳನ್ನು ತಿರಸ್ಕರಿಸಲಾಗುವುದು. ಈಗಾಗಲೇ ಸೌಲಭ್ಯ ಪಡೆದ ಕುಟುಂಬದ ಸದಸ್ಯರಿಗೆ ಅರ್ಜಿ ಸಲ್ಲಿಸಲು ಅವಕಾಶ ಇರುವುದಿಲ್ಲ. ಪುರಸಭೆಯ ಸಾಮಾನ್ಯ ಸಭೆಯಲ್ಲಿ ಫಲಾನುಭವಿಗಳನ್ನು ಆಯ್ಕೆ ಮಾಡಿದ ನಂತರ ಸೌಲಭ್ಯವನ್ನು ನೀಡಲಾಗುವುದು. ಹೆಚ್ಚಿನ ಮಾಹಿತಿಗಾಗಿ ಕಾರ್ಯಾಲಯದಲ್ಲಿ ಸಂಬಂಧಿಸಿದ ಅಧಿಕಾರಿಗಳನ್ನು ಸಂಪರ್ಕಿಸಬಹುದು ಎಂದು ನವಲಗುಂದ ಪುರಸಭೆಯ ಮುಖ್ಯಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ದೈಹಿಕ ಶಿಕ್ಷಣ ಮಹಾವಿದ್ಯಾಲಯದಲ್ಲಿ ಚಿತ್ರಕಲಾ ಸ್ಪರ್ಧೆ

**ಬೆಳಗಾವಿ ವಾರ್ತೆ ಮೂಡಲಗಿ:** ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರ ಜಯಂತಿ ಅಂಗವಾಗಿ ಮೂಡಲಗಿ ಶಿಕ್ಷಣ ಸಂಸ್ಥೆಯ ದೈಹಿಕ ಶಿಕ್ಷಣ ಮಹಾವಿದ್ಯಾಲಯದಲ್ಲಿ

ರಾಣಿ ಚನ್ನಮ್ಮ ವಿಶ್ವವಿದ್ಯಾಲಯ ಅವರ ಸಹಯೋಗದಲ್ಲಿ ಚಿತ್ರಕಲಾ ಸ್ಪರ್ಧೆ ಜರುಗಿತು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಮಹಾವಿದ್ಯಾಲಯದ ಪ್ರಾಚಾರ್ಯ ಡಾ. ಎಮ್.ಕೆ. ಕಂಕಣವಾಡಿ ಮಾತನಾಡಿ, ವಿದ್ಯಾರ್ಥಿಗಳು ಪಠ್ಯಜ್ಞಾನಕ್ಕಷ್ಟೇ ಸೀಮಿತವಾಗದೆ, ಅಂಬೇಡ್ಕರ್ ಅವರ ತತ್ವಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು, "ಸಮಾನತೆ, ನ್ಯಾಯ ಮತ್ತು ಶಿಕ್ಷಣವೇ ನಮ್ಮ ಜೀವನದ ದಿಕ್ಕು ತೋರಿಸುವ ಬೆಳಕು" ಎಂದು ಹೇಳಿದರು.

ಚಿತ್ರಕಲಾ ಸ್ಪರ್ಧೆಯು ಕೇವಲ ಕಲಾತ್ಮಕ ಅಭಿವ್ಯಕ್ತಿ ಮಾತ್ರವಲ್ಲ, ಒಂದು ಸಾಮಾಜಿಕ ಸಂದೇಶದ ವೇದಿಕೆಯಾಗಿ ರೂಪುಗೊಂಡಿತು. ವಿದ್ಯಾರ್ಥಿಗಳು ತಮ್ಮ ಚಿತ್ರಗಳಲ್ಲಿ ಅಂಬೇಡ್ಕರ್ ಅವರ ಜೀವನ ಹೋರಾಟ, ಸಂವಿಧಾನದ ಮಹತ್ವ, ಸಾಮಾಜಿಕ ಸಮಾನತೆ, ಶಿಕ್ಷಣದ ಶಕ್ತಿ ಇತ್ಯಾದಿ ವಿಚಾರಗಳನ್ನು ಮನಮುಟ್ಟುವ ರೀತಿಯಲ್ಲಿ ಮೂಡಿಸಿದರು. ಪ್ರತಿಯೊಂದು ಚಿತ್ರವೂ ಒಂದು ಸಂದೇಶವನ್ನು ಹೊತ್ತು ತಂದಿದ್ದು, ಕಲೆಯ ಮೂಲಕ ಸಮಾಜ ಪರಿವರ್ತನೆ ಸಾಧ್ಯ ಎಂಬುದನ್ನು ಸಾಬೀತುಪಡಿಸಿತು ಇಂತಹ ಸ್ಪರ್ಧೆಗಳು ವಿದ್ಯಾರ್ಥಿಗಳಲ್ಲಿ ಸೃಜನಶೀಲತೆ, ಚಿಂತನೆ ಸಾಮರ್ಥ್ಯ ಮತ್ತು ಸಾಮಾಜಿಕ ಜಾಗೃತಿಯನ್ನು ಹೆಚ್ಚಿಸುವಲ್ಲಿ ಪ್ರಮುಖ ಪಾತ್ರವಹಿಸುತ್ತವೆ ಎಂದರು.



ಚಿತ್ರಕಲಾ ಸ್ಪರ್ಧೆಯಲ್ಲಿ ವಿಜೇತರಾದ ಪ್ರಥಮ ಸ್ಥಾನ ಶಿವಾನಂದ ನಾಯಿಕ, ದ್ವಿತೀಯ ಸ್ಥಾನ ರೂಪಾ ಪಾಟೀಲ, ತೃತೀಯ ಸ್ಥಾನ ಕಿರಣ ಕರಗನ್ನವರ ಪಡೆದುಕೊಂಡರು.

ಈ ಸಂದರ್ಭದಲ್ಲಿ ಡಾ. ಎಲ್.ಬಿ. ಮನ್ನಾಪುರ, ಬಿ.ಕೆ. ಬಡಗಣ್ಣವರ, ಬಿ.ಎಸ್. ಕಂಬಾರ, ಎಸ್.ಎಂ. ಹಳ್ಳೂರ, ಬಸವರಾಜ ದಳವಾಯಿ ಹಾಗೂ ಮತ್ತಿತರರು ಉಪಸ್ಥಿತರಿದ್ದರು.

# ಕುರುಬ ಸಮುದಾಯದ ವಿರುದ್ಧ ಹೇಳಿಕೆ ಖಂಡನೀಯ

## ಸಿ.ಸಿ.ಪಾಟೀಲ ಅವರು ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಬೇಕು : ರುದ್ರಣ್ಣ ಗುಳಗುಳಿ



**ಬೆಳಗಾವಿ ವಾರ್ತೆ ಗದಗ :** ಬಾಗಲಕೋಟೆಯ ವಿಧಾನಸಭೆಯ ಉಪ ಚುನಾವಣೆಯ ಸಭೆಯಲ್ಲಿ ಕುರುಬ ಸಮುದಾಯವನ್ನು ದೂರವಿಡಬೇಕು ಎಂದು ಹೇಳಿಕೆ ನೀಡಿರುವ ನರಗುಂದ ಶಾಸಕ ಸಿ.ಸಿ.ಪಾಟೀಲ ಅವರು ಶಾಸಕರಾಗಿ ಮುಂದುವರೆಯಲು ಯೋಗ್ಯರಲ್ಲ ವರು ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಬೇಕು ಎಂದು ಹಾಲುಮತ ಮಹಾಸಭಾದ ರಾಜ್ಯಾಧ್ಯಕ್ಷರಾದ ರುದ್ರಣ್ಣ ಗುಳಗುಳಿ ಅವರು ಹೇಳಿದರು.

ನಗರದ ಪತ್ರಿಕಾಭವನದಲ್ಲಿ ಶನಿವಾರ ಕರೆದ ಸುದ್ದಿಗೋಷ್ಠಿಯಲ್ಲಿ ಅವರು ಮಾತನಾಡಿ, ಹಿಂದಿನ ಬಿಜೆಪಿ ಸರಕಾರದಲ್ಲಿ ಮುಖ್ಯಮಂತ್ರಿಯಾಗಿದ್ದ ಬಸವರಾಜ ಬೊಮ್ಮಾಯಿ ಅವರು ಕುರುಬ ಸಮುದಾಯವನ್ನು ಎಸ್‌ಟಿಗೆ ಸೇರಿಸುವ ಶಿಫಾರಸ್ಸಿನ ನಿರ್ಣಯ ಕೈಗೊಂಡು ಕೇಂದ್ರಕ್ಕೆ ಸಲ್ಲಿಸಿರುವುದು ಮತ್ತು ಕೇಂದ್ರ ಸಚಿವ ಪ್ರಲ್ಹಾದ ಜೋಶಿ, ಎಚ್.ಡಿ.ಕುಮಾರಸ್ವಾಮಿ ಅವರು ಕುರುಬ ಸಮುದಾಯಕ್ಕೆ ನ್ಯಾಯ ಕೊಡಿಸಲು ಶ್ರಮಿಸುತ್ತಿರುವುದು ಒಂದೆಡೆಯಾದರೆ ಅದೇ ಪಕ್ಷದ ಒಬ್ಬ ಶಾಸಕ ತನ್ನ ಪ್ರಚಾರ ಬಾಷಣದಲ್ಲಿ ಅಲ್ಪಸಂಖ್ಯಾತರನ್ನು ಮತ್ತು ಕುರುಬ ಸಮುದಾಯವನ್ನು ದೂರವಿಡಬೇಕು ಎಂದು ಬೇಜಾಬ್ದಾರಿ ಹೇಳಿಕೆ ನೀಡಿರುವುದು ಎಷ್ಟು ಸರಿ? ಇಂತವರು ಶಾಸಕರಾಗಿ ಮುಂದುವರೆಯಲು ಯೋಗ್ಯರಲ್ಲ, ಐದು ಖಾತೆಗಳನ್ನು ಪೂರೈಸಿ, ನಾಲ್ಕು ಬಾರಿ ಶಾಸಕರಾಗಿರುವ ಇವರು ಸ್ವಜಾತಿಯವರನ್ನು ಓಲೈಕೆ ಮಾಡಲು ಇಂತಹ ಹೇಳಿಕೆ ನೀಡುವುದು ಸರಿಯಲ್ಲ. ಅಲ್ಲದೆ, ಇವರು ಕುರುಬ ಸಮುದಾಯಕ್ಕೆ ಮಾಡುತ್ತಿರುವ ಶೋಷಣೆ ಇದೇ ಮೊದಲಲ್ಲ ಈ ಹಿಂದೆ ಬಳಗಾನೂರ ಗ್ರಾಮದಲ್ಲಿ ಸ್ವಜಾತಿಯ ವಿಷ ಬೀಜ ಬಿತ್ತಿ ಕುರುಬ ಸಮುದಾಯದ ಅಮಾಯಕ 34 ಯುವಕರ ಮೇಲೆ ವಿನಾಕಾರಣ ಪ್ರಕರಣ ದಾಖಲಿಸಿ ಅವರನ್ನು ಕೋರ್ಟಿಗೆ ಅಲೆದಾಡುವಂತೆ ಮಾಡಿದ್ದಾರೆ ಇಂತವರಿಂದ ಸಾಮಾಜಿಕ ನ್ಯಾಯ ನಿರೀಕ್ಷಿಸಲು ಸಾಧ್ಯವಿಲ್ಲ ಎಂದು ಹೇಳಿದರು.

ಶಾಸಕ ಸಿ.ಸಿ.ಪಾಟೀಲ ಅವರು ಕ್ಷಮಾಪಣೆ ಕೇಳುವದು ಬೇಕಾಗಿಲ್ಲ ರಾಜ್ಯಪಾಲರು ಅವರ ಶಾಸಕ ಸ್ಥಾನವನ್ನು ವಜಾಗೊಳಿಸಬೇಕು. ಅವರು ತಮ್ಮ ತಾಕತ್ತನ್ನು ಪ್ರದರ್ಶನ ಮಾಡಲು ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಿ, ಕುರುಬ ಸಮುದಾಯ ಮತ್ತು ಅಲ್ಪಸಂಖ್ಯಾತರ ಮತಗಳ ತಮಗೆ ಬೇಕಾಗಿಲ್ಲ ಎಂದು ಘೋಷಣೆ ಮಾಡಿ ಚುನಾವಣೆ ಎದುರಿಸಲಿ ಎಂದು ರುದ್ರಣ್ಣ ಗುಳಗುಳಿ ಅವರು ಎಚ್ಚರಿಕೆ ನೀಡಿದರು.

ಈ ಸುದ್ದಿಗೋಷ್ಠಿಯಲ್ಲಿ ಜಿಲ್ಲಾ ಕೃಷಿಕ ಸಮಾಜದ ಉಪಾಧ್ಯಕ್ಷ ರಾಮಣ್ಣ ಹೂವಣ್ಣವರ, ನರಗುಂದ ಕ್ಷೇತ್ರದ ಮಹಿಳಾ ಮುಖಂಡರಾದ ಉಮಾ ದ್ಯಾವನೂರ, ಹಾಲುಮತ ಮಹಾಸಭಾದ ಗೌರವಾಧ್ಯಕ್ಷರಾದ ನಾಗರಾಜ ಮೆಣಸಗಿ, ಜಿಲ್ಲಾಧ್ಯಕ್ಷರಾದ ಬಸವರಾಜ ನೀಲಗಾರ, ರಾಘು ವಗ್ಗನವರ, ಸೋಮನಗೌಡ ಪಾಟೀಲ, ಸತೀಶ ಗಿಡ್ಡಹನುಮಣ್ಣನವರ, ಬಸವರಾಜ ಕುರಿ, ಮುತ್ತು ಜಡಿ, ಮಂಜು ಜಡಿ, ಶಿವರಾಜ ವನ್ನೂರ, ಮಂಜು ಪೂಜಾರ, ಸೋಮು ಮೇಟಿ, ರಾಜು ಪೂಜಾರ, ರವಿ ಅಬ್ಬಿಗೇರಿ, ಶ್ಯಾಮಸುಂದರ ಡಂಬಳ, ಬಸವರಾಜ ಹೊಂಬಳ, ಮಂಜುನಾಥ ಡಂಬಳ ಸೇರಿದಂತೆ ಮುಂತಾದವರು ಉಪಸ್ಥಿತರಿದ್ದರು.

# ನಾಲತವಾಡದ ವೀರೇಶ್ವರ ಪದವಿ ಪೂರ್ವ ಕಾಲೇಜಿಗೆ ಶೇ. 90.97 ರಷ್ಟು ಭವ್ಯ ಫಲಿತಾಂಶ



**ಬೆಳಗಾವಿ ವಾರ್ತೆ ಮುದ್ದೇಬಿಹಾಳ:** ತಾಲ್ಲೂಕಿನ ನಾಲತವಾಡ ಪಟ್ಟಣದ ಪ್ರತಿಷ್ಠಿತ ವೀರೇಶ್ವರ ಪದವಿ ಪೂರ್ವ ಕಾಲೇಜು ಈ ಬಾರಿಯ ಪಿಯುಸಿ ದ್ವಿತೀಯ ವರ್ಷದ ಫಲಿತಾಂಶದಲ್ಲಿ ಶೇ. 90.97 ರಷ್ಟು ಸಾಧನೆ ಮಾಡುವ ಮೂಲಕ ತಾಲ್ಲೂಕಿನ ಗಮನ ಸೆಳೆದಿದೆ. ಕಾಲೇಜಿನ ವಿದ್ಯಾರ್ಥಿಗಳು ವಿವಿಧ ವಿಭಾಗಗಳಲ್ಲಿ ಅತ್ಯುನ್ನತ ಶ್ರೇಣಿಯಲ್ಲಿ ಉತ್ತೀರ್ಣರಾಗಿ ವಿದ್ಯಾಸಂಸ್ಥೆಯ ಕೀರ್ತಿ ಪತಾಕೆಯನ್ನು ಹಾರಿಸಿದ್ದಾರೆ.

**ವಿಭಾಗವಾರು ಟಾಪರ್‌ಗಳು:** ಕಲಾ ವಿಭಾಗದಲ್ಲಿ ಕುಮಾರಿ ಲಕ್ಷ್ಮೀ ಗುಬ್ಬಿ ಶೇ. 89.83 ರಷ್ಟು ಅಂಕ ಗಳಿಸಿ ಪ್ರಥಮ ಸ್ಥಾನ ಪಡೆದರೆ, ವಾಣಿಜ್ಯ ವಿಭಾಗದಲ್ಲಿ ಕುಮಾರಿ ಅನ್ನಪೂರ್ಣ ವಾಲಿ ಶೇ. 89.16 ರಷ್ಟು ಅಂಕಗಳನ್ನು ಗಳಿಸಿ ಸಾಧನೆ ಮಾಡಿದ್ದಾರೆ. ಅದೇ ರೀತಿ ಶಿಕ್ಷಣ ವಿಭಾಗದಲ್ಲಿ ಕುಮಾರಿ ಶಿವಲೀಲಾ ನಾಯ್ಕೋಡಿ ಶೇ. 88.83 ರಷ್ಟು ಅಂಕಗಳನ್ನು ಪಡೆದು ಕಾಲೇಜಿಗೆ ಹೆಮ್ಮೆ ತಂದಿದ್ದಾರೆ.

ಈ ಸಂದರ್ಭದಲ್ಲಿ ಸಂಸ್ಥೆಯ ಚೇರಮನ್ ಎಂ.ಎಸ್. ಪಾಟೀಲ, ಕಾರ್ಯದರ್ಶಿ ಮುತ್ತು ಅಂಗಡಿ, ಉಚಿತ ಪ್ರಸಾದ ನಿಲಯದ ಚೇರಮನ್ ಎ.ಜಿ. ಗಂಗನಗೌಡ್ರ ಹಾಗೂ ಪ್ರಾಚಾರ್ಯರಾದ ಡಾ. ದತ್ತಾತ್ರೇಯ ಮಳಖೇಡ ಅವರು ಹರ್ಷ ವ್ಯಕ್ತಪಡಿಸಿದ್ದಾರೆ. ಶ್ರಮವಹಿಸಿ ಬೋಧಿಸಿದ ಉಪನ್ಯಾಸಕ ವೃಂದ ಹಾಗೂ ಸಾಧಕ ವಿದ್ಯಾರ್ಥಿಗಳನ್ನು ಆಡಳಿತ ಮಂಡಳಿಯು ಅಭಿನಂದಿಸಿದ್ದಾರೆ.

# ಎಂ.ಅರವಿಂದ ಅವರಿಗೆ ಧಾರವಾಡ ಜಿಲ್ಲಾಮಟ್ಟದ ಡಾ. ಬಿ.ಆರ್. ಅಂಬೇಡ್ಕರ್ ಪ್ರಶಸ್ತಿ ಪ್ರದಾನ

**ಬೆಳಗಾವಿ ವಾರ್ತೆ ಧಾರವಾಡ:** ಪ್ರಸಕ್ತ ಸಾಲಿನ ಧಾರವಾಡ ಜಿಲ್ಲಾಮಟ್ಟದ ಡಾ. ಬಿ.ಆರ್. ಅಂಬೇಡ್ಕರ್ ಜನ್ಮ ದಿನಾಚರಣೆಯ ಅಂಗವಾಗಿ ಜಿಲ್ಲಾಡಳಿತದಿಂದ ನೀಡಲಾಗುವ ಉತ್ಕೃಷ್ಟ ಸಮಾಜಸೇವಾ ಪ್ರಶಸ್ತಿಯನ್ನು ಸಮಾಜಸೇವಕ ಎಂ. ಅರವಿಂದ ಅವರಿಗೆ ಪ್ರದಾನಿಸಲಾಯಿತು.

ಇಂದು ಬೆಳಿಗ್ಗೆ ಧಾರವಾಡ ಉಪವಿಭಾಗಾಧಿಕಾರಿಗಳ ಕಚೇರಿಯಲ್ಲಿ, ಉಪವಿಭಾಗಾಧಿಕಾರಿ ಶಾಲಂ ಹುಸೇನ್ ಅವರು ಪ್ರಶಸ್ತಿ ನೀಡಿ, ಗೌರವಿಸಿದರು.

ಸಮಾಜದ ಹಿಂದುಳಿದ ವರ್ಗಗಳ ಅಭಿವೃದ್ಧಿ, ಸಾಮಾಜಿಕ ನ್ಯಾಯ ಹಾಗೂ ಜನಪರ ಸೇವಾ ಕಾರ್ಯಗಳಲ್ಲಿ ತೊಡಗಿಸಿಕೊಂಡಿರುವ ಎಂ. ಅರವಿಂದ ಅವರ ಸೇವೆಯನ್ನು ಪರಿಗಣಿಸಿ ಈ ಗೌರವ ನೀಡಲಾಗಿದೆ.

ಈ ಸಂದರ್ಭದಲ್ಲಿ ವಿವಿಧ ಇಲಾಖೆಗಳ ಅಧಿಕಾರಿಗಳು, ಸಮಾಜ ಮುಖಂಡರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.



# ಇಸ್ರೋ "ಯುವಿಕಾ–2026" ರಾಷ್ಟ್ರಮಟ್ಟದ ವಿಜ್ಞಾನ ಮೇಳಕ್ಕೆ ಬೀದರಕುಂದಿ ವಿದ್ಯಾರ್ಥಿನಿ ಆಯ್ಕೆ



**ಬೆಳಗಾವಿ ವಾರ್ತೆ ಮುದ್ದೇಬಿಹಾಳ:** ತಾಲ್ಲೂಕಿನ ಬಿದರಕುಂದಿ ಗ್ರಾಮದ ಸರ್ಕಾರಿ ಆದರ್ಶ ವಿದ್ಯಾಲಯದ 9ನೇ ತರಗತಿ ವಿದ್ಯಾರ್ಥಿನಿ ಕುಮಾರಿ ಗ್ರಂಥಿಕಾ ಕುಂಬಾರ ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ (ISRO) ವತಿಯಿಂದ ನಡೆಯಲಿರುವ ಪ್ರತಿಷ್ಠಿತ 'ಯುವ ವಿಜ್ಞಾನಿ ಕಾರ್ಯಕ್ರಮ' (YUVIKA-2026) ಕ್ಕೆ ಆಯ್ಕೆಯಾಗು ವ ಮೂಲಕ ಗ್ರಾಮ ಹಾಗೂ ತಾಲ್ಲೂಕಿಗೆ ಕೀರ್ತಿ ತಂದಿದ್ದಾಳೆ. ಭಾರತ ಸರ್ಕಾರದ ಬಾಹ್ಯಾಕಾಶ ಇಲಾ ಖೆಯು ಶಾಲಾ ಮಕ್ಕಳಲ್ಲಿ ಬಾಹ್ಯಾಕಾಶ ವಿಜ್ಞಾನ ಮತ್ತು ತಂತ್ರಜ್ಞಾನದ ಬಗ್ಗೆ ಆಸಕ್ತಿ ಮೂಡಿಸಲು ರಾಷ್ಟ್ರಮ ಟ್ಟದಲ್ಲಿ ಈ ವಿಶೇಷ ಮೇಳವನ್ನು ಆಯೋ ಜಿಸುತ್ತಿದೆ. ಬರುವ ಮೇ 10 ರಂದು ನಡೆ ಯಲಿರುವ ಈ ಮೇಳದಲ್ಲಿ ಭಾಗವಹಿಸಲು ಗ್ರಂಥಿಕಾ ಅರ್ಹತೆ ಪಡೆದಿದ್ದಾಳೆ. **ಶಿಕ್ಷಕ ವೃಂದದ ಹರ್ಷ:** ಗ್ರಾಮೀಣ ಭಾಗದ ಶಾಲೆಯಲ್ಲಿ ಓದುತ್ತಾ ರಾಷ್ಟ್ರಮ ಟ್ಟದ ಇಂತಹ ದೊಡ್ಡ ವೇದಿಕೆಗೆ ಆಯ್ಕೆ ಯಾದ ವಿದ್ಯಾರ್ಥಿನಿಯ ಸಾಧನೆಗೆ ಶಾಲೆಯ ಪ್ರಾಂಶುಪಾಲರಾದ ಅನಿಲ್‌ರಾಠೋಡ್, ಶಿಕ್ಷಕರಾದ ಸಂಗಮೇಶ ಸಜ್ಜನ್ ಸೇರಿದಂತೆ ಶಾಲೆಯ ಸರ್ವ ಶಿಕ್ಷಕರು ಹಾಗೂ ಸಿಬ್ಬಂದಿ ವರ್ಗದವರು ಹರ್ಷ ವ್ಯಕ್ತಪಡಿಸಿ, ವಿದ್ಯಾರ್ಥಿನಿಯ ಮುಂದಿನ ಯಶಸ್ಸಿಗೆ ಶುಭ ಹಾರೈಸಿದ್ದಾರೆ.

# ಗಂಗಾವತಿಯಲ್ಲಿ ಕಲಾ ಕುಸುಮ ಸಂಗೀತ ಕಾರ್ಯಕ್ರಮ



**ಬೆಳಗಾವಿ ವಾರ್ತೆ ಗಂಗಾವತಿ :** ಕನ್ನಡ ಹಾಗೂ ಸಂಸ್ಕೃತಿ ಇಲಾಖೆ ಕೊಪ್ಪಳ ಬೆಂಗಳೂರು ಹಾಗೂ ಶ್ರೀ ಗುರು ಕುಮಾರೇಶ್ವರ ಸಂಗೀತ ಮತ್ತು ಲಲಿತ ಕಲಾ ಸಂಸ್ಥೆ ಗಂಗಾವತಿ ಇವರ ಸಹಯೋಗದಲ್ಲಿ ಇಂದು ಗವಾಯಿ ಶ್ರೀ ಕುಮಾರ ಪಂಚಾಕ್ಷರ ಶ್ರೀ ಬೊಮ್ಮಲಾಪುರ ರವರ ಸ್ವರ ಶ್ರದ್ಧಾಂಜಲಿ ಪ್ರಯುಕ್ತ ಕಲಾ ಕುಸುಮ ಸಂಗೀತ ಕಾರ್ಯಕ್ರಮ ಇಂದು ಸ್ಥಳೀಯ ಪಿಎಂಶ್ರೀ ಸರಕಾರಿ ಮಾದರಿಯ ಪ್ರಾಥಮಿಕ ಶಾಲೆ ಗಂಗಾವತಿಯಲ್ಲಿ ಜರುಗಿತು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ರಾಜೇಶ್ವರಿ ಕುಮಾರ್ ಪಂಚಾಕ್ಷರ ಇವರು ವಹಿಸಿ ಮಾತನಾಡುತ್ತಾ, ಕನ್ನಡ ಸಂಸ್ಕೃತಿ ಇಲಾಖೆ ಹಾಗೂ ಕೊಪ್ಪಳ ಮತ್ತೂ ಗಂಗಾವತಿ ಎಲ್ಲ ಸಹೋದರ ಸಹೋದರಿಯುವರಿಂದ ಮತ್ತೂ ನಾಗರಿಕರಿಂದ ಈ ಕಾರ್ಯಕ್ರಮ ನಡೆದು ಬಂದಿದೆ.

ಇಂದು ನನ್ನ ಪತಿ ಶ್ರೀಕುಮಾರ್ ಪಂಚಾಕ್ಷರವರ ಆತ್ಮಕ್ಕೆ ಶಾಂತಿ ದೊರಕಿದೆ. ಪ್ರತಿ ವರ್ಷ ತಮ್ಮೆಲ್ಲರ ಸೇವೆ ಇದಾಗಿರಲಿ ಎಂದು ಹೇಳಿದರು.

ಬಿಸಿಲು ಗುದುರೆ ದಿನಪತ್ರಿಕೆಯ ಸಂಪಾದಕರು, ಹಿರಿಯ ಸಂಗೀತ ಕಲಾವಿದರು ಮಾತಾನಾಡುತ್ತಾ ಗಂಗಾವತಿಯು ಸಂಸ್ಕೃತಿಯ ನಾಡು, ಸಂಗೀತದ ಬೀಡಾಗಿದೆ. ಅದರಂತೆ ಇಂದು ಶ್ರೀ ಕುಮಾರ್ ಪಂಚಾಕ್ಷರವರ ಸ್ವರ ಶ್ರದ್ಧಾಂಜಲಿ ಉತ್ತಮವಾಗಿ ಸಂಗೀತ ಕಾರ್ಯಕ್ರಮ ಜರಗಿತು ಎಂದು ಶುಭ ಹಾರೈಸಿದರು.

ಉದ್ಘಾಟಕರಾಗಿ ಆಗಮಿಸಿದ ಕಲ್ಯಾಣ ನಗರದ ಕ್ಷೇಮ ಅಭಿವೃದ್ಧಿ ಸಂಘದ ಅಧ್ಯಕ್ಷರು ಶ್ರೀ ಬಸಪ್ಪ ನಾಗೋಲಿ ಅವರು ಕುಮಾರ್ ಪಂಚಾಕ್ಷರವರ ಬಗ್ಗೆ ಮಾತನಾಡುತ್ತಾ ಕುಮಾರ್ ಪಂಚಾಕ್ಷರವರ ಸಂಗೀತ ಜ್ಞಾನದಿಂದ ಎತ್ತರಕ್ಕೆ ಬೆಳೆದವರಾಗಿದ್ದರು. ಅವರ ಸಂಘಟನೆ ಚೆನ್ನಾಗಿತ್ತು. ಒಗ್ಗಟ್ಟಿನಿಂದ ಎಲ್ಲವೂ ಸಾಧ್ಯವಾಯಿತು. ಮುಂದಿನ ದಿನಮಾನಗಳಲ್ಲಿ ಇನ್ನೂ ಉತ್ತಮ ಕಾರ್ಯಗಳನ್ನು ಮಾಡಿಕೊಂಡು ಬರೋಣ ಎಂದು ಶುಭ ಹಾರೈಸಿದರು.

ಹಿರಿಯ ಅತಿಥಿಗಳು ಶ್ರೀ ಯಂಕೋಬ ರವರು ವೇದಿಕೆಯಲ್ಲಿ ಉಪಸ್ಥಿತರಿದ್ದರು.

ಕಾರ್ಯಕ್ರಮದಲ್ಲಿ ನಾಗರಾಜ್ ಶ್ಯಾವಿ ಕೊಪ್ಪಳ. ರಾಘವೇಂದ್ರ ಗಂಗಾವತಿ ಹಾಗೂ ಶ್ರೀಮತಿ ವಿಜಯಲಕ್ಷ್ಮಿ ನಾಗರಾಜ್. ಪ್ರಕಾಶ್ ಪಾಟೀಲ ಶಿಕ್ಷಕರುಗಂಗಾವತಿ . ಶ್ರೀ ಶಿವಕುಮಾರ್ ಗೆಜ್ಜೆ ಶಿಕ್ಷಕರು ಗಂಗಾವತಿ. ವೈಷ್ಣವಿ ಹಾಗೂ ಶ್ರೀ ಗುರು ಪುಟ್ಟರಾಜ ಸಂಗೀತ ಪಾಠಶಾಲಾ ತಂಡದಿಂದ ಪ್ರಾರ್ಥನೆ ಜರುಗಿತು ಶ್ರೀ ಬಿನ್ನಾಳರವರು ಪ್ರಾಸ್ತಾವಿಕ ಮಾತನಾಡಿದರು.

ಕಲ್ಯಾಣ ನಗರದ ನಾಗರಿಕರು ಅನೇಕ ಕಲಾವಿದರು ಹಾಗೂ ಇತರರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು

# ಕು. ಸಂಗೀತಾ ಎಸ್. ಪೋಲೀಸಪಾಟೀಲ ಅವರಿಗೆ ಸನ್ಮಾನ



**ಬೆಳಗಾವಿ ವಾರ್ತೆ ಕೊಪ್ಪಳ :** ಜಿಲ್ಲೆಯ ಮಂಗಳೂರು ಗ್ರಾಮದ ಕುಮಾರಿ ಸಂಗೀತಾ ಶೇಖರಗೌಡ್ರ. ಪೋಲೀಸಪಾಟೀಲ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಕಲಾ ವಿಭಾಗದಲ್ಲಿ ರಾಜ್ಯಕ್ಕೆ ಪ್ರಥಮ ಸ್ಥಾನ ಪಡೆದಿದ್ದು ಇಂದು ಅವರ ನಿವಾಸಕ್ಕೆ ಗಂಗಾವತಿ ಮಾಜಿ ಶಾಸಕರಾದ ಪರಣ್ಣ ಮುನವಳ್ಳಿ ಅವರು ಭೇಟಿ ನೀಡಿ ವಿದ್ಯಾರ್ಥಿನಿಗೆ ಸನ್ಮಾನಿಸಿ ಗೌರವಿಸಿದರು.

ನಂತರ ಮಾತನಾಡಿ ಈ ವಿದ್ಯಾರ್ಥಿನಿಯ ಸಾಧನೆ ಇಡೀ ನಮ್ಮ ಕೊಪ್ಪಳ ಜಿಲ್ಲೆ ಹೆಮ್ಮೆ ಪಡುವ ವಿಷಯವಾಗಿದೆ ಎಂದರು. ಈ ವಿದ್ಯಾರ್ಥಿನಿಯ ಮುಂದಿನ ಮೂರು ವರ್ಷಗಳ ಪದವಿ ಶಿಕ್ಷಣಕ್ಕೆ ನಮ್ಮ ಕೆಎಲ್‌ಇ ಸಂಸ್ಥೆಯಿಂದ ಉಚಿತ ಶಿಕ್ಷಣ, ಉಚಿತ ವಸತಿ ಸೌಲಭ್ಯ ನೀಡಲು ಸಂಪೂರ್ಣ ಸಹಕಾರ ನೀಡುತ್ತೇವೆ ಎಂದರು.

ಈ ಸಂದರ್ಭದಲ್ಲಿ ಮಂಜುನಾಥ ಸೊರಟೂರು, ಗವಿಸಿದ್ದಪ್ಪ ಆರೇರ ವಕೀಲರು,ಶೇಖರಗೌಡ್ರ ಪೋಲೀಸಪಾಟೀಲ,ಶ್ವೇತಾ ಎಸ್. ಪೋಲೀಸಪಾಟೀಲ, ಶ್ರೀಶೈಲಪ್ಪ ಗೊಂಡಬಾಳ,ಸಂಗಪ್ಪ, ಇತರರು ಇದ್ದರು.


# ವಿಂಡ್ ಪವರ್ ಕಾಟಕ್ಕೆ ರೈತನ ಅತಿರೇಕ ಪ್ರತಿಭಟನೆ : ಹೈಟೆನ್ಷನ್ ಕಂಬ ಏರಿದ ನಾಗರಾಜ್ ಗೊಂದಿ

## ಅಧಿಕಾರಿಗಳ ನಿರ್ಲಕ್ಷ್ಯಕ್ಕೆ ಗ್ರಾಮಸ್ಥರ ಆಕ್ರೋಶ : ಬಿಸಿಲಿನ ನಡುವೆಯೇ ಜೀವ ಪಣಕ್ಕಿಟ್ಟು ಪ್ರತಿಭಟನೆ

**ಬೆಳಗಾವಿ ವಾರ್ತೆ ಕೊಪ್ಪಳ :** ವಿಂಡ್ ಪವರ್ ಕಂಪನಿಯ ದೌರ್ಜನ್ಯ ಹಾಗೂ ಅಧಿಕಾರಿಗಳ ನಿರ್ಲಕ್ಷ್ಯಕ್ಕೆ ಬೇಸತ್ತ ರೈತನೊಬ್ಬ ಹೈಟೆನ್ಷನ್ ವಿದ್ಯುತ್ ಕಂಬ ಏರಿ ಪ್ರತಿಭಟನೆ ನಡೆಸಿದ ಘಟನೆ ಯಲಬುರ್ಗಾ ತಾಲೂಕಿನ ಹುಣಸಿ ಹಾಳ ಗ್ರಾಮದಲ್ಲಿ ಶನಿವಾರ ಬೆಳಗ್ಗೆ ನಡೆದಿದೆ.

ಗ್ರಾಮದ ನಾಗರಾಜ್ ಗೊಂದಿ ಎಂಬ ರೈತನು ಯಾವುದೇ ನೋಟೀಸ್ ನೀಡದೇ ಕಂಪನಿಯುವರು ತನ್ನ ಜಮೀನಿನಲ್ಲಿ ವಿದ್ಯುತ್ ಕಂಬಗಳನ್ನು ಅಳವಡಿಸುತ್ತಿರುವುದನ್ನು ವಿರೋಧಿಸಿ ಇಂದು ಬೆಳಿಗ್ಗೆ ಸುಮಾರು 9 ಗಂಟೆಯಿಂದಲೇ ಹೈಟೆನ್ಷನ್ ಕಂಬದ ಮೇಲೆ ಏರಿ ಕುಳಿತಿದ್ದಾನೆ. ಸುಮಾರು 38 ಡಿಗ್ರಿಗೂ ಅಧಿಕ ಉಷ್ಣತೆಯ ನಡುವೆಯೂ ಜೀವದ ಹಂಗನ್ನೂ ಲೆಕ್ಕಿಸದೆ ಆತ ಪ್ರತಿಭಟನೆ ಮುಂದುವರಿಸುತ್ತಿದ್ದಾನೆ.

ವಿಂಡ್ ಪವರ್ ಸಿಬ್ಬಂದಿಗಳು ವಿದ್ಯುತ್ ಸಂಪರ್ಕ ಕಾಮಗಾರಿಯ ವೇಳೆ ಟ್ರ್ಯಾಕ್ಟರ್ ಮೂಲಕ ರೈತನ ಜಮೀನಿನಲ್ಲಿ ಸಾಗಿಬಂ ದು ಶೇಂಗಾ ಬೆಳೆಯನ್ನು ಹಾನಿಗೊಳಿ ಸಿದ್ದರಿಂದ ರೈತ ಆಕ್ರೋಶಗೊಂಡಿದ್ದಾನೆ.



ಈ ಹಿನ್ನೆಲೆ ಪರಿಹಾರ ನೀಡುವಂತೆ ಒತ್ತಾಯಿಸಿ ಆತ ಕಂಬ ಏರಿ ಪ್ರತಿಭಟನೆಗೆ ಇಳಿದಿದ್ದಾನೆ.

ಹೃದಯ ಸಮಸ್ಯೆಯಿಂದ ಬಳಲುತ್ತಿರುವ ನಾಗರಾಜ್ ಅವರ ಆರೋಗ್ಯದ ಬಗ್ಗೆ ಗ್ರಾಮಸ್ಥರು ತೀವ್ರ ಆತಂಕ ವ್ಯಕ್ತಪಡಿಸಿದ್ದಾರೆ.

ಸುಮಾರು ನೂರಾರು ಅಡಿ ಎತ್ತರದ ವಿದ್ಯುತ್ ಕಂಬದ ಮೇಲೆ ಕುಳಿತಿರುವುದು ಪರಿಸ್ಥಿತಿಯನ್ನು ಮತ್ತಷ್ಟು ಗಂಭೀರಗೊಳಿಸಿದೆ.

ಘಟನೆಯ ನಂತರ ವಿಂಡ್ ಪವರ್ ಸಿಬ್ಬಂದಿಗಳು ಸ್ಥಳದಿಂದ ತೆರಳಿದ್ದಾರೆ ಎಂದು ಗ್ರಾಮಸ್ಥರು ಆರೋಪಿಸಿದ್ದು, ಇದುವರೆಗೆ ಯಾವುದೇ ಅಧಿಕಾರಿಗಳು ಸ್ಥಳಕ್ಕೆ ಆಗಮಿಸದಿರುವುದಕ್ಕೆ ಆಕ್ರೋಶ ವ್ಯಕ್ತವಾಗಿದೆ. "ಯಾವುದೇ ಅನಾಹುತ ಸಂಭವಿಸಿದರೆ ಹೊಣೆ ಯಾರು?" ಎಂದು ರೈತರು ಪ್ರಶ್ನಿಸುತ್ತಿದ್ದಾರೆ.

ತಕ್ಷಣವೇ ಸಂಬಂಧಿಸಿದ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ರೈತನನ್ನು ಸುರಕ್ಷಿತವಾಗಿ ಕೆಳಗಿಳಿಸುವ ಜೊತೆಗೆ ಸಮಸ್ಯೆಗೆ ಶಾಶ್ವತ ಪರಿಹಾರ ಕಲ್ಪಿಸಬೇಕೆಂದು ಗ್ರಾಮಸ್ಥರು ಆಗ್ರಹಿಸಿದ್ದಾರೆ.

# ಹಾಕಿ, ಸೈಕ್ಲಿಂಗ್, ಕುಸ್ತಿ ಉಚಿತ ತರಬೇತಿ ಶಿಬಿರ

ಬಾಗಲಕೋಟೆ : ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ವತಿಯಿಂದ ನವನಗರದಲ್ಲಿರುವ ಜಿಲ್ಲಾ ಕ್ರೀಡಾಂಗಣ ಹಾಗೂ ಮುಧೋಳ ನಗರದಲ್ಲಿರುವ ಕವಿ ಚಕ್ರವರ್ತಿ ರನ್ನ ತಾಲೂಕಾ ಕ್ರೀಡಾಂಗಣದಲ್ಲಿ ಉಚಿತ ಬೇಸಿಗೆ ತರಬೇತಿ ಶಿಬಿರವನ್ನು ಹಮ್ಮಿಕೊಳ್ಳಲಾಗಿದೆ. ಆಸಕ್ತ ಕ್ರೀಡಾಪಟುಗಳು ಸಂಬಂಧಪಟ್ಟ ತರಬೇತುದಾರರಲ್ಲಿ ಹೆಸರನ್ನು ನೋಂದಾಯಿಸಿಕೊಂಡು ಬೇಸಿಗೆ ತರಬೇತಿ ಶಿಬಿರದಲ್ಲಿ ಭಾಗವಹಿಸಬಹುದಾಗಿದೆ.

ಎಪ್ರೀಲ್ 22 ರಿಂದ ಮೇ 30 ವರೆಗೆ ಹಾಕಿ ಕ್ರೀಡೆ ತರಬೇತಿಗೆ ತರಬೇತುದಾರ ಶರಣ ನಾವಲಗಿ (8762345086) ಎಪ್ರೀಲ್ 22 ರಿಂದ ಮೇ 12 ವರೆಗೆ ಸೈಕ್ಲಿಂಗ್ ತರಬೇತಿಗೆ ತರಬೇತುದಾರ ಶ್ರೀಶೈಲ ಲಾಯನ್ನವರ (9480210536) ಸಂಪರ್ಕಿಸಬಹುದಾಗಿದೆ. ತರಬೇತಿಗಳು ನವನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ಜರುಗಲಿದೆ. ಮುಧೋಳ ಕವಿ ಚಕ್ರವರ್ತಿ ರನ್ನ ಕ್ರೀಡಾಂಗಣದಲ್ಲಿ ಎಪ್ರೀಲ್ 22 ರಿಂದ ಮೇ 12 ವರೆಗೆ ಕುಸ್ತಿ ತರಬೇತಿ ನಡೆಯಲಿದ್ದು, ತರಬೇತಿದಾರ ಅರುಣ ಕುಮಕಾಲೆ (9740268539) ಇವರಲ್ಲಿ ನೋಂದಾಯಿಸಬೇಕು ಎಂದು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ದೂಸಂ.08354–235896ಗೆ ಸಂಪರ್ಕಿಸಬಹುದಾಗಿದೆ.

# ರಾಷ್ಟ್ರೀಯ ದೇವಾಂಗ ಜಾಗೃತ ಸಮಾವೇಶ ಯಶಸ್ವಿಗೊಳಿಸಿ: ದಯಾನಂದಪುರಿ ಸ್ವಾಮೀಜಿ



**ಬೆಳಗಾವಿ ವಾರ್ತೆ ಮುದ್ದೇಬಿಹಾಳ:** ದೇವಾಂಗ(ನೇಕಾರ)ಸಮುದಾಯದ ಸಂಘಟನೆ,ಜಾಗೃತಿಗಾಗಿ ಅಖಿಲ ಭಾರತ ದೇವಾಂಗ ಬೃಹತ್ ಜನಜಾಗೃತಿ ಸಮಾವೇಶ ಹಾಗೂ ದಯಾನಂದಪುರಿ ಸ್ವಾಮೀಜಿಗಳ 36ನೇ ಪಟ್ಟಾಭಿಷೇಕ ಮಹೋತ್ಸವವನ್ನು ಮೇ.8 ಹಾಗೂ 9 ರಂದು ಬಾದಾಮಿ ತಾಲ್ಲೂಕು ಬನಶಂಕರಿ ಕ್ಷೇತ್ರದಲ್ಲಿ ಹಮ್ಮಿಕೊಳ್ಳಲಾಗಿದ್ದು ಸಮಾಜದ ಬಾಂಧವರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಕಾರ್ಯಕ್ರಮ ಯಶಸ್ವಿಗೊಳಿಸಬೇಕು ಎಂದು ದೇವಾಂಗ ಸಮಾಜದ ಜಿಲ್ಲಾಧ್ಯಕ್ಷ ಬಸವರಾಜ ಚಿತ್ತರಗಿ ಹೇಳಿದರು.

ಪಟ್ಟಣದ ಬನಶಂಕರಿ ದೇವಸ್ಥಾನದಲ್ಲಿ ಬುಧವಾರ ಕಾರ್ಯಕ್ರಮಕ್ಕೆ ಆಹ್ವಾನ ನೀಡಲು ಹಂಪಿ ಹೇಮಕೂಟ ಶ್ರೀ ಗಾಯತ್ರಿಪೀಠದ ಜಗದ್ಗುರು ದಯಾನಂದಪುರಿ ಸ್ವಾಮೀಜಿಗಳು ಆಗಮಿಸಿದ್ದ ವೇಳೆ ಅವರು ಸಮಾಜದ ಬಾಂಧವರ ಸಭೆಯಲ್ಲಿ ಮಾತನಾಡಿದರು. ಹಂಪಿಯಲ್ಲಿ ದೇವಾಂಗ ಸಮಾಜದ ಮೂಲಮಠವಿದ್ದು ತಮಿಳುನಾಡಿನ ತ್ರಿಮೂರ್ತಿ ಮಲ್ಲೈನಲ್ಲಿ,ಬಾದಾಮಿಯ ಬನಶಂಕರಿ ಕ್ಷೇತ್ರದಲ್ಲಿ,ವಿಜಾಪುರದಲ್ಲಿ ಮತ್ತು ನೆಲಮಂಗಲದ ಕೆಂಪಲಿಂಗನಹಳ್ಳಿಯಲ್ಲಿ ಶ್ರೀಗಳು ಗಾಯತ್ರಿಪೀಠದ ಶಾಖಾ ಮಠಗಳನ್ನು ಸ್ಥಾಪಿಸಿ ಅಭಿವೃದ್ಧಿಪಡಿಸಿದ್ದಾರೆ ಎಂದು ಹೇಳಿದರು.

ಶ್ರೀ ಬನಶಂಕರಿ ಪತ್ತಿನ ಸಹಕಾರಿ ಸಂಘದ ಅಧ್ಯಕ್ಷ,ಪತ್ರಕರ್ತ ಶಂಕರ ಈ.ಹೆಬ್ಬಾಳ ಮಾತನಾಡಿ, ಹಂಪಿ ಹೇಮಕೂಟ ಗಾಯತ್ರಿಪೀಠ ಮಹಾಸಂಸ್ಥಾನ ಟ್ರಸ್ಟ್ ಹಾಗೂ ಕರ್ನಾಟಕ ರಾಜ್ಯ ದೇವಾಂಗ ಸಂಘದ ಸಹಯೋಗದಲ್ಲಿ ಅಖಿಲ ಭಾರತ ಮಟ್ಟದ ದೇವಾಂಗ ಜನಜಾಗೃತಿ ಸಮಾವೇಶ ಹಾಗೂ ದಯಾನಂದಪುರಿ ಸ್ವಾಮೀಜಿಗಳ 36ನೇ ಪಟ್ಟಾಭಿಷೇಕ ಮಹೋತ್ಸವನ್ನು ಸಂಘಟಿಸಿದ್ದಾರೆ.ರಾಷ್ಟ್ರಾದಾದ್ಯಂತ ಇರುವ ದೇವಾಂಗ ಸಮಾಜ ಬಾಂಧವರನ್ನು ಒಂದೆಡೆ ಸೇರಿಸಿ ನಮ್ಮ ಸಂಘಟನಾ ಶಕ್ತಿಯನ್ನು ತೋರಿಸುವ ಉದ್ದೇಶದಿಂದ ಹಾಗೂ ರಾಜಕೀಯ,ಆರ್ಥಿಕ,ಶೈಕ್ಷಣಿ ಹಾಗೂ ಔದ್ಯೋಗಿಕ ಕ್ಷೇತ್ರಗಳಲ್ಲಿ ಹಿಂದುಳಿದಿರುವ ನಮ್ಮ ಸಮಾಜಕ್ಕೆ ಶಕ್ತಿ ತುಂಬಲು ಸಮಾವೇಶ ಆಯೋಜಿಸಲಾಗಿದೆ ಎಂದು ಹೇಳಿದರು.

ಸಭೆಯ ದಿವ್ಯ ಸಾನಿಧ್ಯ ವಹಿಸಿದ್ದ ಹಂಪಿ ಹೇಮಕೂಟ ಗಾಯತ್ರಿ ಮಹಾ ಸಂಸ್ಥಾನ ಗುರುಪೀಠದ ದಯಾನಂದಪುರಿ ಸ್ವಾಮೀಜಿಗಳು ಮಾತನಾಡಿ,ಮಠದಿಂದ ಈಗಾಗಲೇ ಕೆಂಪಲಿಂಗನಹಳ್ಳಿ ಶಾಖಾಮಠದ ಆವರಣದಲ್ಲಿ ಒಂದು ಶಾಲಾ ಕಟ್ಟಡ,ಬೃಹತ್ ಕಲ್ಯಾಣಮಂಟಪ ನಿರ್ಮಿಸಲಾಗಿದೆ.ದೇವಾಂಗ ಸಂಘವು ಸಮಾಝದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾಪುರಸ್ಕಾರ ನೀಡುತ್ತ ಬಂದಿದೆ.ಇದಲ್ಲದೇ ಹಲವಾರು ಕ್ಷೇತ್ರಗಳಲ್ಲಿ ಹಿಂದುಳಿದಿರುವ ನಮ್ಮ ಸಮಾಜಕ್ಕೆ ಮತ್ತು ನೇಕಾರಿಕೆಯನ್ನೇ ವೃತ್ತಿಯನ್ನಾಗಿ ಮಾಡಿಕೊಂಡಿರುವ ಸಮಾಜದ ಬಾಂಧವರಿಗೆ ಆಧುನಿಕ ತಂತ್ರಜ್ಞಾನದಿಂದ ಆಗುತ್ತಿರುವ ಹಲವಾರು ತೊಂದರೆಗಳಿಗೆ ಪರಿಹಾರಗಳನ್ನು ಕಂಡುಕೊಳ್ಳಲು ಬೃಹತ್ ಸಂಘಟನೆಯ ಸಮಾವೇಶ ಆಯೋಜಿಸಲಾಗುತ್ತಿದೆ.ಕಾರ್ಯಕ್ರಮಕ್ಕೆ ರಾಜ್ಯದ ಮುಖ್ಯಮಂತ್ರಿಗಳು,ಉಪ ಮುಖ್ಯಮಂತ್ರಿಗಳು,ಅನ್ಯ ರಾಜ್ಯದ ಪೀಠಾಧಿಪತಿಗಳು,ದೇವಾಂಗ ಸಮಾಜದ ಅಧ್ಯಕ್ಷರು,ಮುಖಂಡರು ಆಗಮಿಸುತ್ತಿದ್ದಾರೆ.ಈ ಸಮಾವೇಶಕ್ಕೆ ನಾಡಿನ ಮೂಲೆ ಮೂಲೆಯಲ್ಲಿರುವ ದೇವಾಂಗ ಸಮಾಜದ ಕುಲಬಾಂಧವರು ಆಗಮಿಸಿ ಸಮಾವೇಶ ಯಶಸ್ವಿಗೆ ಶ್ರಮಿಸಬೇಕು ಎಂದು ಹೇಳಿದರು.

ಸಭೆಯಲ್ಲಿ ಹಂಪಿ ಹೇಮಕೂಟ ಗಾಯತ್ರಿ ಪೀಠದ ಟ್ರಸ್ಟಿ ನಾಗೇಶ ಭಾವಿಕಟ್ಟಿ, ಸಮಾಜದ ಮುಖಂಡರಾದ ಮುತ್ತಣ್ಣ ಪ್ಯಾಟಿಗೌಡರ,ಸಿದ್ದಣ್ಣ ಚಿತ್ತರಗಿ,ಸಂಗಣ್ಣ ಡಂಬಳ,ಉಮ್ಮಣ್ಣ ಹೆಬ್ಬಾಳ, ಅಮರೀಶ ಡಂಬಳ,ನಾಗಪ್ಪ ಅಗಸಬಾಳ,ಉದಯ ಕುಪ್ಪಸ್ತ,ಯುವ ಘಟಕದ ಅಧ್ಯಕ್ಷ ಶಿವಶಂಕರ ಪ್ಯಾಟಿಗೌಡರ,ಶ್ರೀ ಬನಶಂಕರಿ ಪತ್ತಿನ ಸಹಕಾರಿ ಸಂಘದ ಪರವಾಗಿ ಶ್ರೀಗಳನ್ನು ಸನ್ಮಾನಿಸಲಾಯಿತು.ಸಂಘದ ಅಧ್ಯಕ್ಷ ಶಂಕರ ಹೆಬ್ಬಾಳ, ಉಪಾಧ್ಯಕ್ಷ ರಮೇಶ ಹೆಬ್ಬಾಳ,ಸಂಘದ ಮುಖ್ಯಕಾರ್ಯ ನಿರ್ವಹಣಾಧಿಕಾರಿ ವಿಜಯಲಕ್ಷ್ಮಿ ಪ್ಯಾಟಿಗೌಡರ,ನಿರ್ದೇಶಕರಾದ ಶ್ರೀಕಾಂತ ಹೆಬ್ಬಾಳ,ದ್ಯಾವಪ್ಪ ಹುಣಶ್ಯಾಳ ಸೇರಿದಂತೆ ಉಪಸ್ಥಿತರಿದ್ದರು.

# ಕಾರ್ಮಿಕರ ದಮನಕಾರಿ ನೀತಿ ಖಂಡಿಸಿ ಸಿಐಟಿಯು ಪ್ರತಿಭಟನೆ



**ಬೆಳಗಾವಿ ವಾರ್ತೆ ವಿಜಯಪುರ:** ಕಾರ್ಮಿಕರ ಹಕ್ಕುಗಳ ದಮನಕಾರಿ ನೀತಿ ಖಂಡಿಸಿ ಸೆಂಟರ್ ಆಫ್ ಇಂಡಿಯಾ ಟ್ರೇಡ್ ಯುನಿತನ್ ನೇತೃತ್ವದಲ್ಲಿ ಜಿಲ್ಲಾಧಿಕಾರಿ ಕಚೇರಿ ಎದುರಿಗೆ ಪ್ರತಿಭಟನೆ ನಡೆಸಿ ಜಿಲ್ಲಾಧಿಕಾರಿ ಮೂಲಕ ಸರ್ಕಾರಕ್ಕೆ ಮನವಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಸೆಂಟರ್ ಆಫ್ ಇಂಡಿಯನ್ ಟ್ರೇಡ್ ಯೂನಿಯನ್ ಸಿಐಟಿಯು ರಾಜ್ಯ ಸಮಿತಿಯ ಉಪಾಧ್ಯಕ್ಷ ವಿಜಯಪುರ ಜಿಲ್ಲೆಯ ಉಸ್ತುವಾರಿಗಳಾದ ಆರ್.ಎಸ್. ಬಸವರಾಜ್ ಮಾತನಾಡಿ, ಉತ್ತರ ಪ್ರದೇಶ ಮತ್ತು ಹರಿಯಾಣ ಬಿಜೆಪಿ ನೇತೃತ್ವದ ಸರ್ಕಾರಗಳು ನೋಯಿಡಾ, ಗ್ರೇಟರ್ ನೋಯಿಡಾ ,ಗುರು ಗ್ರಾಮ ಮತ್ತು ರಾಷ್ಟ್ರೀಯ ರಾಜಧಾನಿ ಪ್ರದೇಶದಲ್ಲಿ ಎನ್ಸಿಆರ್ ಕಾರ್ಮಿಕರ ಹೋರಾಟಗಳ ಮೇಲೆ ನಡೆಸುತ್ತಿರುವ ಕ್ರೂರ ದಮನವನ್ನು ಖಂಡಿಸುತ್ತೇನೆ. ಇದು ಕೇವಲ ಕೈಗಾರಿಕಾ ವಿವಾದವಲ್ಲ, ಇದು ನೇರ ವರ್ಗ ಸಂಘರ್ಷದ ಧೈರ್ಯಶಾಲಿ ಅಭಿವ್ಯಕ್ತಿ, ಇಲ್ಲಿ ಸರ್ಕಾರದ ಯಂತ್ರಾಂಗ ಕಾರ್ಪೊರೇಟ್ ಹಿತಾಸಕ್ತಿಗಳನ್ನು ರಕ್ಷಿಸಲು ಕಾರ್ಮಿಕರ ಹಕ್ಕುಗಳನ್ನು ತೀವ್ರತರವಾಗಿ ಕುಗ್ಗಿಸುತ್ತದೆ.

ಎನ್ ಸಿ ಆರ್ ಹರಿಯಾಣ ( ಮನೆ ಸರ್,ಪಾನಿಪತ್ ಸೋನಿಪತ್ ), ರಾಜಸ್ಥಾನ ( ದಿವಾಡಿ, ಇಮ್ರಾನ ಅಲ್ವರ ), ಗುಜರಾತ್ ( ಸುರತ್ ಹಜಿರಾ), ಬಿಹಾರ( ಬರೌನಿ ) ಮತ್ತು ಇತರ ಕೈಗಾರಿಕಾ ಕೇಂದ್ರಗಳ ಕಾರ್ಮಿಕರು ಶಾಶ್ವತ ಉದ್ಯೋಗಗಳಲ್ಲಿ ಗುತ್ತಿಗೆಕಾರ್ಮಿಕ ವ್ಯವಸ್ಥೆ, ಅತಿ ಕಡಿಮೆ ವೇತನ, ಅಮಾನವೀಯ ಕೆಲಸದ ಪರಿಸ್ಥಿತಿಗಳು, ಕಾರ್ಮಿಕ ವಿರೋಧಿ ಲೇಬರ್ ಕೋಡ್ಗಳು ಮತ್ತು ಸರ್ಕಾರದ ಧಮನದ ವಿರುದ್ಧ ಏಕೀಕೃತ ಹೋರಾಟ ನಡೆಸಲಾಗುತ್ತದೆ ಎಂದರು.

ಇದೇ ವೇಳೆ ಸಿಐಟಿಯು ಸಂಚಾಲಕ ಲಕ್ಷ್ಮಣ ಹಂದ್ರಾಳ ಅವರು ಮಾತನಾಡಿ, ಏಪ್ರಿಲ್ 9 ರಂದು ನೋಯಿಡ ಫೇಸ್ – 2 ನಲ್ಲಿ ಆರಂಭವಾದ ಈ ಹೋರಾಟ ವೇಗವಾಗಿ ವ್ಯಾಪಿಸಿದೆ. ನೋಈಡಾ ದಲ್ಲೇ ಸುಮಾರು 40 ಸಾವಿರದಿಂದ 50,000 ಕಾರ್ಮಿಕರನ್ನು ಒಳಗೊಂಡು ಎನ್ ಸಿ ಆರ್ ನಲ್ಲಿ ಆರರಿಂದ ಎಂಟು ಪ್ರಮುಖ ಕೈಗಾರಿಕಾ ಪ್ರದೇಶಗಳು ಮತ್ತು ಹದಿನೈದುಕ್ಕು ಹೆಚ್ಚು ಕೈಗಾರಿಕಾ ವಲಯಗಳಿಗೆ ವಿಸ್ತರಿಸಿದೆ. ಇದು ದೇಶ ವ್ಯಾಪಿ ಹೋರಾಟಗಳ ಭಾಗ ವಾಗಿದೆ – ಬರೌನಿ, ಪಾಣಿಪತ್, ಸೂರತ್ ಮತ್ತು ಮನೆ ಸರದ ಹೋರಾಟಗಳು ಸೇರಿದಂತೆ ಫೆಬ್ರುವರಿ 12ರ ಐತಿಹಾಸಿಕ ಮುಷ್ಕರದ ಮುಂದುವರಿಕೆ ಯಾಗಿದೆ. ಈ ಏಕತೆ ಈಗಾಗಲೇ ಉತ್ತರ ಪ್ರದೇಶ ಸರ್ಕಾರವನ್ನು ವೇತನ ಪರಿಷ್ಕರಣೆ ಘೋಷಿಸಲು ಒತ್ತಾಯಿಸಿದೆ. ಹೋರಾಟವೇ ಫಲ ನೀಡುತ್ತದೆ ಎಂಬುದನ್ನು ಇದು ಮತ್ತೊಮ್ಮೆ ಸಾಬೀತುಪಡಿಸಿದೆ. ಅದಾಗ್ಯೂ, ಈ ವೇತನ ಹೆಚ್ಚಳ ನಾಟಕೀಯವಾಗಿದೆ  ಬದುಕಲು ಅಗತ್ಯವಾದ ಮಟ್ಟಕ್ಕಿಂತ ಬಹಳ ಕಡಿಮೆ. ಉತ್ತರ ಪ್ರದೇಶ ಮತ್ತು ಹರಿಯಾಣದ ಕಾರ್ಮಿಕರು ದೆಹಲಿಯಂತೆ ಸಮಾನ ಜೀವನ ವೆಚ್ಚ ಇದ್ದರೂ ಕಡಿಮೆ ವೇತನ ಪಡೆಯುತ್ತಿದ್ದಾರೆ. ಏರುತ್ತಿರುವ ಬೆಲೆ ಏರಿಕೆಯ ನಡುವೆ ತಿಂಗಳಿಗೆ 26,000 ಕನಿಷ್ಠ ವೇತನದ ಬೇಡಿಕೆ ಕೇವಲ ಬೇಡಿಕೆಯಲ್ಲ ಅದು ಅವಶ್ಯಕತೆ, ಈ ಸ್ಫೋಟವು ವರ್ಷಗಳ ವೇತನ ಸ್ಥಗಿತ, 2014ರಿಂದ ಕನಿಷ್ಠ ವೇತನ ಪರಿಷ್ಕರಣೆ ಇಲ್ಲದಿರುವುದು, ಬೆಲೆ ಏರಿಕೆ ಮತ್ತು ಟ್ರೇಡ್ ಯೂನಿಯನ್ ಚಟುವಟಿಕೆಗಳ ದಮನದ ಫಲವಾಗಿದೆ. ಈಗ ಕಾರ್ಮಿಕರು ಮೌನವನ್ನು ಮುರಿದು ತಮ್ಮ ಹಕ್ಕುಗಳನ್ನು ಪ್ರತಿಪಾದಿಸುತ್ತಿದ್ದಾರೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಅಂಗನವಾಡಿ ಸಂಘಟನೆಯ ಮುಖಂಡರುಗಳಾದ ಸುನಂದ ನಾಯಕ್, ಭಾರತಿ ವಾಲಿ, ಬಿಸಿ ಊಟ ಸಂಘಟನೆಯ ಸುಮಂಗಲ ಆನಂದ್ ಶೆಟ್ಟಿ, ಗ್ರಾಮ ಪಂಚಾಯಿತಿ ನೌಕರರ ಸಂಘಟನೆಯ ಲಾಲಮ್ಮದ್ ಶೇಕ್, ಶಿವಾನಂದ ಅನಿಮಿ, ಶಿವಾನಂದ್ ಬಿರಾದಾರ್, ಬಿಸಿ ಊಟ ಸಂಘಟನೆಯ ಸುರೇಖಾ ವಾಗ್ಮೊರೆ, ಭಾರತಿ ಮಠಪತಿ, ಕಟ್ಟಡ ಕಾರ್ಮಿಕ ಸಂಘಟನೆಯ ಈರಣ್ಣ ಬೆಳ್ಳುಂಡಗಿ, ಅಣ್ಣಾರಾಯ ಈಳಿಗೆರ ಮುಂತಾದವರು ಭಾಗವಹಿಸಿದ್ದರು.

# ಗಣತಿ ಕಾರ್ಯಕ್ಕೆ ಚಾಲನೆ



**ಬೆಳಗಾವಿ ವಾರ್ತೆ ನವಲಗುಂದ:** ತಾಲ್ಲೂಕಿನ ಜಾವೂರ ಗ್ರಾಮದಲ್ಲಿ 2026ರ ಮನೆಪಟ್ಟಿ ಗಣತಿ ಕಾರ್ಯಕ್ಕೆ ಶನಿವಾರ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ರವೀಂದ್ರ ಗೌಡ ಪಾಟೀಲ ಅಧಿಕೃತವಾಗಿ ಚಾಲನೆ ನೀಡಿದರು. ಈ ವೇಳೆ ಮಾತನಾಡಿದ ಅವರು ಗಣತಿ ಕಾರ್ಯವು ಸರ್ಕಾರದ ಯೋಜನೆಗಳ ಪರಿಣಾಮಕಾರಿ ಅನುಷ್ಠಾನಕ್ಕೆ ಅತ್ಯಂತ ಮುಖ್ಯವಾಗಿದ್ದು, ಸಾರ್ವಜನಿಕರು ಪೂರ್ಣ ಸಹಕಾರ ನೀಡಿ ಎಂದರು. ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ಸರ್ಕಾರಿ ನೌಕರ ಸಂಘದ ತಾಲ್ಲೂಕು ಅಧ್ಯಕ್ಷ ವಿ.ಡಿ. ರಂಗಣ್ಣವರ ಮಾತನಾಡಿ ಸಾರ್ವಜನಿಕರು ಸರಿಯಾದ ಮಾಹಿತಿಯನ್ನು ನೀಡುವ ಮೂಲಕ ಗಣತಿ ಕಾರ್ಯ ಯಶಸ್ವಿಗೊಳಿಸಲು ಸಹಕರಿಸಬೇಕು ಎಂದು ಸಾರ್ವಜನಿಕರಲ್ಲಿ ಮನವಿ ಮಾಡಿದರು. ಗಣತಿದಾರರಾದ ಎಸ್. ಎನ್. ಅಕ್ಕಿಮರಡಿ, ಜಿ.ಎ.ಬೆಳಹಾರ, ಸರಿತಾಕೊಪ್ಪದ, ಪಿಡಿಓವಿಜಯಲಕ್ಷ್ಮಿ ಕೊರವರ ಸತೀಶ ಕೋರಿ ಇತರರು ಇದ್ದರು.

# ಜಾತ್ರಾ ಮಹೋತ್ಸವ

**ಬೆಳಗಾವಿ ವಾರ್ತೆ ನವಲಗುಂದ:** ಪಟ್ಟಣದಲ್ಲಿರುವ ಗವಿಮಠದ ಜಗದ್ಗುರು ಶ್ರೀ ಸಿದ್ಧಲಿಂಗೇಶ್ವರ ಜಾತ್ರಾ ಮಹೋತ್ಸವ ಹಾಗೂ ಸರ್ವ ಧರ್ಮ ಸಮನ್ವಯ ಪ್ರಶಸ್ತಿ ಪ್ರಧಾನ ಮತ್ತು ಸಾಮೂಹಿಕ ವಿವಾಹ ಮಹೋತ್ಸವ ಸೇರಿ ದಂತೆ ವಿಶೇಷ ಕಾರ್ಯಕ್ರಮಗಳು ಇಂದು ಏ 19 ರಿಂದ ಏ 23 ರ ವರೆಗೆ ಜರುಗಲಿವೆ.

ಏ 21 ಮಂಗಳವಾರ ದಂದು ಆರೋಗ್ಯ ಚಿಂತನ ಗೋಷ್ಠಿ, ಮಕ್ಕಳ ಮತ್ತು ಮಹಿಳಾ ಚಿಂತನ ಗೋಷ್ಠಿ. ಏ 22 ಬುದುವಾರದಂದು ಜಾನುವಾರು ಪ್ರದರ್ಶನ ಹಾಗೂ ನವಲಗುಂದ ಅರ್ಬನ್ ಬ್ಯಾಂಕ್ ನವಲಗುಂದ ಇವರಿಂದ ಜಾನುವಾರುಗಳಿಗೆ ಬಹುಮಾನ ನೀಡುವುದು

ಏ 23 ಗುರುವಾರ ಬೆಳಿಗ್ಗೆ 6 ಘಂಟೆಗೆ ಶ್ರೀ ಸಿದ್ಧಲಿಂಗೇಶ್ವರರ ಕರ್ತೃ ಗದ್ದುಗೆಗೆ ವಚನಾಭಿಷೇಕ, ಬೆಳಿಗ್ಗೆ 8 ಕ್ಕೆ ಅಂಗದೀಕ್ಷೆ, ಅಯ್ಯಾಚಾರ 10 ಗಂಟೆಗೆ ಡಾ. ರಾಮು ಮೂಲಗಿ ಜಾನಪದ ವಿದ್ವಾಂಸರು ಹುಬ್ಬಳ್ಳಿ ಇವರಿಗೆ ಸರ್ವಧರ್ಮ ಸಮನ್ವಯ ಪ್ರಶಸ್ತಿ ಪ್ರಧಾನ ಹಾಗೂ ಸಾಮೂಹಿಕ ವಿವಾಹ ಮಹೋತ್ಸವ, ಬೆ.11–30 ಕ್ಕೆ ಮಹಾಪ್ರಸಾದ ಸಂಜೆ 05 ಘಂಟೆಗೆ ವಿವಿಧ ವಾದ್ಯ ವೈಭವ 'ಗಳೊಂದಿಗೆ ಸುಮಂಗಲೆಯರಿಂದ ಆರತಿ, ಕಳಸ, ಕನ್ನಡಿಯೊಂದಿಗೆ ಶ್ರೀ ಸಿದ್ಧಲಿಂಗೇಶ್ವರ ಮಹಾರಥೋತ್ಸವ ಜರುಗಲಿದೆ.

ಧಾರವಾಡ ಮುರುಘಾಮಠ ಮಲ್ಲಿಕಾರ್ಜುನ ಸ್ವಾಮೀಜಿ, ಹುಬ್ಬಳ್ಳಿ ರುದ್ರಾಕ್ಷಿಮಠ ಬಸವಲಿಂಗ ಸ್ವಾಮೀಜಿ ಸಾನಿಧ್ಯ ವಹಿಸಲಿದ್ದಾರೆ



**ಧರ್ಮ ಜೊತಿ ಗ್ರಂಥ ಬಿಡುಗಡೆ :** ಗುಡ್ಡದಆನವರಿ ವಿರಕ್ತಮಠದ ಶಿವಯೋಗೇಶ್ವರ ಸ್ವಾಮೀಜಿ, ಅಗಡಿ–ಗುತ್ತಲ ಪ್ರಭುಸ್ವಾಮಿಮಠದ ಗುರುಸಿದ್ಧ ಸ್ವಾಮೀಜಿ, ರಾಯನಾಳ ವಿರಕ್ತಮಠದ ರೇವಣ ಸಿದ್ದೇಶ್ವರ ಸ್ವಾಮೀಜಿ, ತುಪ್ಪದಕುರಹಟ್ಟಿ ಹಿರೇಮಠದ ವಾಗೀಶ ಪಂಡಿತರಾಧ್ಯಸ್ವಾಮೀಜಿ, ಯಲಬುರ್ಗ ಶ್ರೀಧರ ಮುರಡಿ ಹಿರೇಮಠದ ಬಸವಲಿಂಗ ಸ್ವಾಮೀಜಿ, ಬದಾಮಿ ನವಗ್ರಹ ಹಿರೇಮಠದ ಶಿವಪೂಜ ಸ್ವಾಮೀಜಿ, ಅಕ್ಕಿಆಲೂರು ಚನ್ನವೀರೇಶ್ವರ ವಿರಕ್ತಮಠದ ಶಿವಬಸವ ಸ್ವಾಮೀಜಿ, ಚಿಗೇರಿ–ವೆಂಕಟಾಪೂರ ಹಿರೇಮಠದ ಗುರುಸಿದ್ದೇಶ್ವರ ಸ್ವಾಮೀಜಿ, ಸಾಲೋಟಗಿ ಶ್ರೀ ಸಿದ್ದೇಶ್ವರ ಗುರುದೇವ ಆಶ್ರಮದ ಸಂಗಮೇಶ್ವರಸ್ವಾಮೀಜಿ, ನವಲಗುಂದ ಪಂಚಗೃಹ ಹಿರೇಮಠದ ವೀರಬಸವ ದೇವರು, ಹೊಳೆಆಲೂರ ಯಚ್ಚರಸ್ವಾಮಿ ಮಠದ ಅಭಿನವ ಯಚ್ಚರಸ್ವಾಮೀಜಿಯವರು ಧರ್ಮ ಜೊತಿ ಗ್ರಂಥ ಬಿಡುಗಡೆ ಮಾಡಲಿದ್ದಾರೆ. ಕರ್ಲವಾಡ ಹಿರೇಮಠದ ಸಿದ್ಧವೀರ ಸ್ವಾಮೀಜಿ ಹಾಗೂ ಶಾಸಕ ಎನ್ ಎಚ್ ಕೋನರಡ್ಡಿ, ಮಾಜಿ ಶಾಸಕರಾದ ಶಂಕರ ಪಾಟೀಲಮುನೇನಕೊಪ್ಪ, ಕೆ ಎನ್ ಗಡ್ಡಿ ಸೇರಿದಂತೆ ವಿವಿಧ ಗಣ್ಯರು ಹಾಗೂ ಅಧಿಕಾರಿಗಳು ವಿಶೇಷ ಸನ್ಮಾನಿತರಾಗಿ ಭಾಗವಹಿಸಲಿದ್ದಾರೆ. ಅಲ್ಲದೇ ಈ ಜಾತ್ರಾ ಮಹೋತ್ಸವದಲ್ಲಿ ಇನ್ನೂ ಅನೇಕ ಮಠಾಧೀಶರು, ಜನಪ್ರತಿ ನಿಧಿಗಳು, ಸಾಹಿತಿಗಳು, ಸಂಗೀತಗಾರರು ಹಾಗೂ ಕನ್ನಡ ಮತ್ತು ಸಾಂಸ್ಕೃತಿಕ ಇಲಾಖೆಯ ವತಿಯಿಂದ ಕಲಾತಂಡಗಳು ಭಾಗವಹಿಸುವವು.

# ಡಾ. ರಾಜ್ ಜನ್ಮ ದಿನಾಚರಣೆ ಅರ್ಥಪೂರ್ಣಗೊಳಿಸಲು ಸೂಚನೆ

**ಬೆಳಗಾವಿ ವಾರ್ತೆ ವಿಜಯಪುರ:** ವಿಶೇಷ ನಟನೆ ಮೂಲಕ ಕನ್ನಡಿಗರ ಮನೆ–ಮಾತಾದ ನಟ ಸಾರ್ವಭೌಮ ಡಾ.ರಾಜಕುಮಾರ್ ಅವರ ಜನ್ಮ ದಿನಾಚರಣೆಯ ಕಾರ್ಯಕ್ರಮವನ್ನು ಜಿಲ್ಲೆಯಲ್ಲಿ ವಿಶಿಷ್ಟವಾಗಿ ಆಚರಿಸಲು ಅಧಿಕಾರಿಗಳು ವಿಶೇಷ ಮುತುವರ್ಜಿ ವಹಿಸಿ ಕಾರ್ಯಕ್ರಮಕ್ಕೆ ಸಿದ್ಧತೆ ಕೈಗೊಳ್ಳಬೇಕು ಎಂದು ಅಪರ ಜಿಲ್ಲಾಧಿಕಾರಿ ಡಾ. ಔದ್ರಾಮ ಹೇಳಿದರು.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ ಡಾ.ರಾಜ್‌ಕುಮಾರ್ ಜನ್ಮ ದಿನಾಚರಣೆಯ ಪೂರ್ವಭಾವಿ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲಾಡಳಿತ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಮೇರುನಟ ಡಾ.ರಾಜ್‌ಕುಮಾರ್ ಅವರ ಜನ್ಮ ದಿನಾಚರಣೆಯ ಕಾರ್ಯಕ್ರಮವನ್ನು ಏ.24ರಂದು ಬೆಳಿಗ್ಗೆ 9 ಗಂಟೆಗೆ ನಗರದ ಕಂದಗಲ್ ಶ್ರೀ ಹನುತರಾಯ ರಂಗಮಂದಿರದಲ್ಲಿ ಆಯೋಜಿಸಲು ನಿರ್ಧರಿಸಲಾಗಿದ್ದು, ಅಗತ್ಯ ಸಿದ್ಧತೆ ಕೈಗೊಳ್ಳುವಂತೆ ಅಪರ ಡಾ.ಔದ್ರಾಮ ಅವರು ತಿಳಿಸಿದರು.

ಡಾ. ರಾಜ್ ಕುಮಾರ ಅವರು, ಕನ್ನಡದ ಮೇರು ನಟ, ನಟಸಾರ್ವಭೌಮರಾಗಿ ಈ ನಾಡು ಕಂಡ ನೆಚ್ಚಿನ ನಟರಾಗಿದ್ದಾರೆ. ಕನ್ನಡಪರ ಹೋರಾಟಗಳಲ್ಲಿ ಭಾಗಿಯಾಗಿ ನಾಡು–ನುಡಿಗಾಗಿ ಮಹತ್ತರ ಸೇವೆ ಸಲ್ಲಿಸಿದ್ದಾರೆ. ಇವರ ಜನ್ಮ ದಿನವನ್ನು ಅರ್ಥಪೂರ್ಣವಾಗಿ ಆಚರಿಸಬೇಕು ಎಂದರು. ವಿವಿಧ ಪಾತ್ರಗಳಲ್ಲಿ ಮನಮಿಡಿಯುವಂತೆ ನಟಿಸಿ ಕಲಾರಾಧಕರ ಹೃದಯ ಗೆದ್ದಿದ್ದಾರೆ. ಇವರ ಕಾರ್ಯಕ್ರಮ ಯಶಸ್ಸಿಗೆ ವಿವಿಧ ಇಲಾಖೆಗಳ ಅಧಿಕಾರಿಗಳು ವಹಿಸಿರುವ ಕೆಲಸ ನಿರ್ವಹಿಸಿ, ಈ ಕಾರ್ಯಕ್ರಮವನ್ನು ಅಚ್ಚುಕಟ್ಟಾಗಿ ನಡೆಯುವಂತೆ ವ್ಯವಸ್ಥೆ ಮಾಡಲು ಅಧಿಕಾರಿಗಳಿಗೆ ಸೂಚನೆ ನೀಡಿದರು.



ಪೂರ್ವಭಾವಿ ಸಿದ್ಧತಾ ಸಭೆಯಲ್ಲಿ, ವಿವಿಧ ಕನ್ನಡ ಪರ ಸಂಘಟನೆಗಳ ಮುಖಂಡರು ಸಲಹೆ ನೀಡಿದಂತೆ ಈ ಕಾರ್ಯಕ್ರಮದಲ್ಲಿ ಡಾ.ರಾಜಕುಮಾರ್ ಅವರ ಚಲನಚಿತ್ರ ಗೀತೆಗಳನ್ನು ಹಾಡಲು ಆಸಕ್ತ ಕಲಾವಿದರು ಮತ್ತು ಎಲ್ಲ ಸಾರ್ವಜನಿಕರಿಗೆ ಅವಕಾಶ ಕಲ್ಪಿಸಬೇಕು. ವಯಸ್ಸಿನ ಮಿತಿ ವಿಧಿಸದೇ,ಕಾರ್ಯಕ್ರಮದ ನಿಗದಿತ ಸಮಯ ಮೀರದಂತೆ ಕಾರ್ಯಕ್ರಮದ ಯಶಸ್ಸಿಗೆ ಎಲ್ಲರಿಗೂ ಅವಕಾಶ ನೀಡಬೇಕು ಎಂದರು.

ಕಾರ್ಯಕ್ರಮದಲ್ಲಿ ಡಾ.ರಾಜ್‌ಕುಮಾರ್ ಅವರ ಅಭಿನಯದ ಚಲನಚಿತ್ರಗಳ ಗೀತಗಾಯನ ಕಾರ್ಯಕ್ರಮದ ಮೆರಗನ್ನು ಹೆಚ್ಚಿಸಲು ಅಗತ್ಯ ವ್ಯವಸ್ಥೆ ಮಾಡಬೇಕು ಎಂದು ಸೂಚಿಸಿದರು. ಶಿಷ್ಠಾಚಾರದಂತೆ ಆಮಂತ್ರಣ ಪತ್ರಿಕೆ ಮುದ್ರಿಸಿ ವಿತರಿಸಬೇಕು. ಕುಡಿಯುವ ನೀರಿನ ವ್ಯವಸ್ಥೆ ಮಾಡಬೇಕು. ಕಾರ್ಯಕ್ರಮದ ಅವಧಿಯಲ್ಲಿ ನಿರಂತರ ವಿದ್ಯುತ್ ಪೂರೈಸಲು, ಪೊಲೀಸ್ ಭದ್ರತೆ ವ್ಯವಸ್ಥೆ ಕೈಗೊಳ್ಳಲು, ಕಾರ್ಯಕ್ರಮವನ್ನು ಯಾವುದೇ ಗೊಂದಲಗಳಿಲ್ಲದೇ ಅಚ್ಚುಕಟ್ಟಾಗಿ ನಿರ್ವಹಿಸಲು ಕಲಾವಿದರ ಸಮನ್ವಯ ಮಾಡಲು ಅಧಿಕಾರಿಗಳಿಗೆ ಸೂಚಿಸಿದರು.

ಪೂರ್ವಭಾವಿ ಸಿದ್ಧತಾ ಸಭೆಯಲ್ಲಿ ನಿರ್ಧರಿಸಿದಂತೆ, ಡಾ.ರಾಜಕುಮಾರ್ ಅವರ ಅಭಿನಯದ ಚಲನಚಿತ್ರ ಗೀತೆಗಳ ಗಾಯನಕ್ಕೆ ಸಾರ್ವಜನಿಕರಿಗೆ ಮುಕ್ತ ಅವಕಾಶ ಕಲ್ಪಿಸುವ ಬಗ್ಗೆ ಪ್ರಚಾರ ಒದಗಿಸಬೇಕು. ಆಸಕ್ತರು ಹೆಸರು ನೋಂದಾಯಿಸುವ ಪ್ರತಿಯೊಬ್ಬರಿಗೂ ಕೆಲವು ಷರತ್ತು ಹಾಗೂ ಸಮಯದ ಮಿತಿಯಡಿ ಅವಕಾಶ ಕಲ್ಪಿಸಬೇಕು. ಹೆಸರು ನೋಂದಣಿಗೆ ಅವಕಾಶ ಒದಗಿಸಬೇಕು. ನೋಂದಣಿ ಮಾಡಿಕೊಂಡವರಿಗೆ ಮಾತ್ರ ಅವಕಾಶ ನೀಡಬೇಕು. ಯಾವುದೇ ಪ್ರಸ್ತುತಿ ಪುನರಾವರ್ತಿತ ಆಗದಂತೆ ಮುಂಚೆಯೇ ಪಟ್ಟಿ ಸಿದ್ಧಮಾಡಿಕೊಳ್ಳಬೇಕು ಎಂದು ಸಭೆಯಲ್ಲಿ ಪಾಲ್ಗೊಂಡಿದ್ದ ಮುಖಂಡರು ಸಭೆಗೆ ಸಲಹೆ ನೀಡಿದರು.

ಸಭೆಯಲ್ಲಿ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಉಪ ನಿರ್ದೇಶಕ ವೀರಯ್ಯ ಸಾಲಿಮಠ, ಮಹಾನಗರ ಪಾಲಿಕೆಯ ಉಪ ಆಯುಕ್ತ ಮಹಾವೀರ ಬೋರಣ್ಣವರ, ಸಹಾಯಕ ತೋಟಗಾರಿಕಾ ನಿರ್ದೇಶಕ ಭಗವಂತ ಜಿಗಜಿಣಗಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಸಂತೋಷ ಭೋವಿ, ಯುವ ಸಬಲೀಕರಣ ಹಾಗೂ ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ರಾಜಶೇಖರ ಧೈವಾಡಿ ಎಂ.ಸಿ ಮುಲ್ಲಾ, ಅಡಿವೆಪ್ಪ ಸಾಲಗಲ್, ಸುರೇಶ ಬಿಜಾಪುರ, ಫಯಾಜ್ ಕಲಾದಗಿ, ಶರಣು ಸಬರದ, ಮಂಜುಳಾ ಅಂಗಡಿ, ಸುರೇಶ ಬಬಲೇಶ್ವರ, ಸೋಮನಗೌಡ ಕಲ್ಲೂರ, ಭೀಮರಾಯ ಜಿಗಜಿಣಗಿ ಸೇರಿದಂತೆ ವಾರ್ತಾ ಇಲಾಖೆಯ ಸಿಬ್ಬಂದಿ ಉಪಸ್ಥಿತರಿದ್ದರು.

BELAGAVI VARTE Kannada Daily morning news paper Editor, Printer, Publisher and Owned by MAHESHWARI BHIMASHI BHARAMANNAVAR, 221/1A/1A/1A MAHALINGESHWAR NAGAR, NEAR BCA HOSTEL BELAGAVI KARNATAKA 591307. Printed at RAJADHANI PRINTING PRESS, CTS NO.1720/B1, SHOP NO.2 KELKARBAG, BELAGAVI, KARNATAKA - 590001